ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 89 Friday **25-09-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 89 ಶುಕ್ರವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಮಳೆ ಕೊರತೆ; ಬೆಳೆ ಇಲ್ಲ, ಎಪಿಎಂಸಿ ಬಣ ಬಣ!

ಕಳೆದ ವರ್ಷ 44 ಸಾವಿರ ಹೆಕ್ಟೇರ್ ಮೆಕ್ಕೆಜೋಳ; ಈ ಬಾರಿ 9 ಸಾವಿರ ಹೆಕ್ಟೇರ್‌ಗೆ ಕುಸಿತ

"ಮುಂಜಾನೆಯ ಮೆರಗು"

ಜಗಳೂರು ಸೆ, 24– ಮುಂಗಾರು ಮಳೆ ಕೈಕೊಟ್ಟ ಪರಿಣಾಮ ಕೃಷಿ ಚಟುವಟಿಕೆಗಳು ಕುಂಠಿತಗೊಂಡಿದ್ದು, ಸಾಮಾನ್ಯವಾಗಿ ರೈತರ ಬೆಳೆಗಳಿಂದ ಗಿಜಿಗುಡಬೇಕಿದ್ದ ಜಗಳೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ) ಈ ಬಾರಿ ಬೆಳೆ ಇಲ್ಲದೆ ಬಣಗುಡುತ್ತಿದೆ.

ಮುಂಗಾರು ಮಳೆ ವಾಡಿಕೆಯಂತೆ ಉತ್ತಮವಾಗಿ ಸುರಿದಿದ್ದರೆ ಈ ವೇಳೆಗೆ ಮೆಕ್ಕೆಜೋಳ ಸೇರಿದಂತೆ ವಿವಿಧ ಬೆಳೆಗಳು ಕಟಾವಿಗೆ ಬಂದು ಎಪಿಎಂಸಿ ಮಾರುಕಟ್ಟೆಗೆ ರೈತರು ತಮ್ಮ ಉತ್ಪನ್ನಗಳನ್ನು ತರುತ್ತಿದ್ದರು. ಆದರೆ ಮಳೆ ಕೊರತೆಯಿಂದ ಬಿತ್ತನೆಯಾದ ಬೆಳೆಗಳಿಗೂ ಸಮರ್ಪಕ ನೀರು ದೊರೆಯದೆ ಒಣಗಿದ್ದು, ನಿರೀಕ್ಷಿತ ಇಳುವರಿ ಸಿಗದಂತಾಗಿದೆ. ಇದರ ನೇರ ಪರಿಣಾಮ ಎಪಿಎಂಸಿ ಮಾರುಕಟ್ಟೆಯ ಮೇಲೂ ಬಿದ್ದಿದೆ.

44 ಸಾವಿರದಿಂದ 9 ಸಾವಿರ ಹೆಕ್ಟೇರ್‌ಗೆ ಕುಸಿದ ಮೆಕ್ಕೆಜೋಳ

ಕಳೆದ ವರ್ಷ ತಾಲೂಕಿನಲ್ಲಿ ಸುಮಾರು 44 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮೆಕ್ಕೆಜೋಳ ಬಿತ್ತನೆ ಮಾಡಲಾಗಿತ್ತು.



ಆದರೆ ಈ ಬಾರಿ ಮಳೆ ಕೊರತೆಯಿಂದ ಮೆಕ್ಕೆಜೋಳ ಬಿತ್ತನೆ ಪ್ರಮಾಣ ತೀವ್ರವಾಗಿ ಕುಸಿದು ಸುಮಾರು 9 ಸಾವಿರ ಹೆಕ್ಟೇರ್‌ಗೆ ಸೀಮಿತವಾಗಿದೆ. ಬಿತ್ತನೆಯಾದ ಪ್ರದೇಶದಲ್ಲಿಯೂ ಮಳೆ ಕೈಕೊಟ್ಟ ಪರಿಣಾಮ ಬೆಳೆ ಉಳಿಸಿಕೊಳ್ಳುವುದು ರೈತರಿಗೆ ಸವಾಲಾಗಿದೆ.

ಹೀಗಾಗಿ ಸಾಮಾನ್ಯವಾಗಿ ಈ ಅವಧಿಯಲ್ಲಿ ಎಪಿಎಂಸಿಗೆ ನಿರಂತರವಾಗಿ ಹರಿದುಬರಬೇಕಿದ್ದ ಮೆಕ್ಕೆಜೋಳದ ಪ್ರಮಾಣ ಗಣನೀಯವಾಗಿ ಇಳಿಕೆಯಾಗಿದೆ.

18 ಸಾವಿರ ಹೆಕ್ಟೇರ್ ರಾಗಿ; ನೀರಿನ ಕೊರತೆಯ ಆತಂಕ

ತಾಲೂಕಿನಲ್ಲಿ ಈವರೆಗೆ ಸುಮಾರು 18 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ರಾಗಿ, 9 ಸಾವಿರ ಹೆಕ್ಟೇರ್ ಮೆಕ್ಕೆಜೋಳ, 1,800 ಹೆಕ್ಟೇರ್ ಶೇಂಗಾ, 200 ಹೆಕ್ಟೇರ್ ಸೂರ್ಯಕಾಂತಿ ಹಾಗೂ 200ಕ್ಕೂ ಅಧಿಕ ಹೆಕ್ಟೇರ್ ಪ್ರದೇಶದಲ್ಲಿ ತೊಗರಿ ಸೇರಿದಂತೆ ವಿವಿಧ ಬೆಳೆಗಳನ್ನು ರೈತರು ಬೆಳೆದಿದ್ದಾರೆ.

ಆದರೆ ಮಳೆ ಕೊರತೆಯ ಹಿನ್ನೆಲೆಯಲ್ಲಿ ಈ ಬೆಳೆಗಳಿಗೂ ಸಮರ್ಪಕ ನೀರು ದೊರೆಯದೆ ಇಳುವರಿ ಮೇಲೆ ಪರಿಣಾಮ ಬೀರುವ ಆತಂಕ ಎದುರಾಗಿದೆ. ಬಿತ್ತನೆ ಮಾಡಿ ಬೆಳೆ ಉಳಿಸಿಕೊಳ್ಳಲು ಹರಸಾಹಸಪಡುತ್ತಿರುವ ರೈತರಿಗೆ ಮಳೆ ಮತ್ತಷ್ಟು ನಿರಾಶೆ ಮೂಡಿಸಿದೆ.

ದರ ಇದೆ... ಆದರೆ ಮಾಲು ಇಲ್ಲ!

ಮಾರುಕಟ್ಟೆಯಲ್ಲಿ ಕೃಷಿ ಉತ್ಪನ್ನಗಳಿಗೆ ಉತ್ತಮ ದರ ದೊರೆಯುತ್ತಿದ್ದರೂ, ರೈತರ ಕೈಯಲ್ಲಿ ಮಾರಾಟಕ್ಕೆ ಬೇಕಾದಷ್ಟು ಉತ್ಪನ್ನ ಇಲ್ಲದಿರುವುದು ಈ ಬಾರಿಯ ವ್ಯತಿರಿಕ್ತ ಪರಿಸ್ಥಿತಿಯಾಗಿದೆ.

"ರೈತರು ಬೆಳೆದರೆ ತಾನೇ ಮಾರುಕಟ್ಟೆಗೆ ತರುತ್ತಾರೆ. ಮಳೆ ಕೊರತೆಯಿಂದ ಇಳುವರಿ ಕಡಿಮೆಯಾಗಿದೆ. ಅಲ್ಪಸ್ವಲ್ಪ ಮೆಕ್ಕೆಜೋಳ ಮಾತ್ರ ಮಾರುಕಟ್ಟೆಗೆ ಬರುತ್ತಿದೆ. ಈಗ ಉತ್ತಮ ದರವಿದೆ; ಆದರೆ ಮಾಲು ಇಲ್ಲ" ಎಂದು ಎಪಿಎಂಸಿ ಕಾರ್ಯದರ್ಶಿ ಶಿವಕುಮಾರ್ ತಿಳಿಸಿದ್ದಾರೆ.

ಮಾರುಕಟ್ಟೆಯ ಚಟುವಟಿಕೆಗಳಿಗೆ ಬರದ ಬಿಸಿ

ಜಗಳೂರು ತಾಲೂಕು ಕೃಷಿ ಪ್ರಧಾನ ಪ್ರದೇಶವಾಗಿದ್ದು, ಸಾವಿರಾರು ರೈತ



ಕುಟುಂಬಗಳ ಕೃಷಿ ಉತ್ಪನ್ನಗಳ ವಹಿವಾಟಿಗೆ ಎಪಿಎಂಸಿ ಪ್ರಮುಖ ಕೇಂದ್ರವಾಗಿದೆ. ಸಾಮಾನ್ಯವಾಗಿ ಮುಂಗಾರು ಹಂಗಾಮಿನ ಬೆಳೆಗಳು ಕಟಾವಿಗೆ ಬಂದ ಸಂದರ್ಭದಲ್ಲಿ ಎಪಿಎಂಸಿಯಲ್ಲಿ ವಾಹನಗಳ ಓಡಾಟ, ಕೃಷಿ ಉತ್ಪನ್ನಗಳ ರಾಶಿ, ಖರೀದಿ–ಮಾರಾಟದ ಚಟುವಟಿಕೆಗಳಿಂದ ಗಿಜಿಗುಡುತ್ತಿತ್ತು.

ಆದರೆ ಈ ಬಾರಿ ಮಳೆ ಕೊರತೆಯ ಪರಿಣಾಮ ಕೃಷಿ ಉತ್ಪಾದನೆಯೇ ಕುಂಠಿತವಾಗಿರುವುದರಿಂದ ಮಾರುಕಟ್ಟೆಯಲ್ಲೂ ಅದರ ಪ್ರತಿಫಲನ ಕಂಡುಬರುತ್ತಿದೆ.

ರೈತನ ಹೊಲದಲ್ಲಿ ಬೆಳೆ ಇಲ್ಲದಿದ್ದರೆ, ಎಪಿಎಂಸಿಯ ಅಂಗಳಕ್ಕೂ ಮಾಲು ಬರುವುದಿಲ್ಲ. ಈ ಬಾರಿ ಮಳೆ ಕೊರತೆ ಸೃಷ್ಟಿಸಿರುವ ಬರದ ಪರಿಸ್ಥಿತಿಯು ರೈತರ ಬದುಕಿನ ಜೊತೆಗೆ ಕೃಷಿ ಮಾರುಕಟ್ಟೆಯ ಚಟುವಟಿಕೆಗಳಿಗೂ ಹೊಡೆತ ನೀಡಿದೆ.

ಗೃಹಲಕ್ಷ್ಮಿ ಫಲಾನುಭವಿಗಳ ಮರುಪರಿಶೀಲನೆ ಅಂಗನವಾಡಿ ಕಾರ್ಯಕರ್ತೆಯರಿಗೆ ತರಬೇತಿ



"ಮುಂಜಾನೆಯ ಮೆರಗು"

ಜಗಳೂರು, ಸೆ.24– ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳ ಮರುಪರಿಶೀಲನೆ ಪ್ರಕ್ರಿಯೆ ಕುರಿತು ಸೊಕ್ಕೆ ವಲಯದ ಅಂಗನವಾಡಿ ಕಾರ್ಯಕರ್ತೆಯರಿಗೆ ತರಬೇತಿ ಕಾರ್ಯಾಗಾರ ನಡೆಯಿತು.

ಪಟ್ಟಣದ ನಾಲ್ಕನೇ ಅಂಗನವಾಡಿ ಕೇಂದ್ರದಲ್ಲಿ ನಡೆದ ಕಾರ್ಯಾಗಾರದಲ್ಲಿ ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿಗಳ ನೇತೃತ್ವದಲ್ಲಿ ಕಾರ್ಯಕರ್ತೆಯರಿಗೆ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳ ಮಾಹಿತಿಯನ್ನು ಮರುಪರಿಶೀಲಿಸುವ ವಿಧಾನ, ದಾಖಲೆಗಳ ಪರಿಶೀಲನೆ ಹಾಗೂ ಅರ್ಹ ಫಲಾನುಭವಿಗಳ ಮಾಹಿತಿಯನ್ನು ಸಮರ್ಪಕವಾಗಿ ದಾಖಲಿಸುವ ಕುರಿತು ಮಾಹಿತಿ ನೀಡಲಾಯಿತು.

ಕಾರ್ಯಾಗಾರವನ್ನು ಉದ್ದೇಶಿಸಿ ಮಾತನಾಡಿದ ಸಿಡಿಪಿಒ ಶಿವಕುಮಾರ್, ಗೃಹಲಕ್ಷ್ಮಿ ಯೋಜನೆಯಡಿ ಈಗಾಗಲೇ ಸೌಲಭ್ಯ ಪಡೆಯುತ್ತಿರುವ ಫಲಾನುಭವಿಗಳ ಮಾಹಿತಿಯನ್ನು ನಿಗದಿತ ಮಾರ್ಗಸೂಚಿಯಂತೆ ಪರಿಶೀಲಿಸಿ, ಅರ್ಹ ಫಲಾನುಭವಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಕ್ರಮವಹಿಸಬೇಕು ಎಂದು ಸೂಚಿಸಿದರು.

ಫಲಾನುಭವಿಗಳ ಕುಟುಂಬದ ಮಾಹಿತಿ, ಆಧಾರ್ ಸೇರಿದಂತೆ ಅಗತ್ಯ ದಾಖಲೆಗಳ ಪರಿಶೀಲನೆ, ಮಾಹಿತಿಯಲ್ಲಿನ ವ್ಯತ್ಯಾಸಗಳನ್ನು ಗುರುತಿಸುವುದು ಹಾಗೂ ಮರುಪರಿಶೀಲನೆ ಸಂದರ್ಭದಲ್ಲಿ ಸಾರ್ವಜನಿಕರಿಗೆ ಸೂಕ್ತ ಮಾಹಿತಿ ನೀಡುವ ಬಗ್ಗೆ ಕಾರ್ಯಕರ್ತೆಯರಿಗೆ ತರಬೇತಿ ನೀಡಲಾಯಿತು. ಮನೆಮನೆಗೆ ತೆರಳಿ ಮಾಹಿತಿ ಸಂಗ್ರಹಿಸುವ ಸಂದರ್ಭದಲ್ಲಿ ಫಲಾನುಭವಿಗಳೊಂದಿಗೆ ಸೌಜನ್ಯದಿಂದ ವರ್ತಿಸಿ, ಯಾವುದೇ ಗೊಂದಲ ಉಂಟಾಗದಂತೆ ಯೋಜನೆಯ ನಿಯಮಗಳನ್ನು ಸ್ಪಷ್ಟವಾಗಿ ತಿಳಿಸಬೇಕು ಎಂದು ಅಧಿಕಾರಿಗಳು ಸಲಹೆ ನೀಡಿದರು.

ಗೃಹಲಕ್ಷ್ಮಿ ಯೋಜನೆಯಡಿ ಮಹಿಳೆಯರಿಗೆ ದೊರೆಯುತ್ತಿರುವ ಆರ್ಥಿಕ ನೆರವು ಅರ್ಹ ಫಲಾನುಭವಿಗಳಿಗೆ ನಿರಂತರವಾಗಿ ತಲುಪುವಂತೆ ಮರುಪರಿಶೀಲನಾ ಕಾರ್ಯವನ್ನು ಜವಾಬ್ದಾರಿಯಿಂದ ಕೈಗೊಳ್ಳುವಂತೆ ಕಾರ್ಯಕರ್ತೆಯರಿಗೆ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಮೇಲ್ವಿಚಾರಕಿ ಶಾಂತಮ್ಮ ಸೇರಿದಂತೆ ಸೊಕ್ಕೆ ವಲಯದ ವಿವಿಧ ಅಂಗನವಾಡಿ ಕೇಂದ್ರಗಳ ಕಾರ್ಯಕರ್ತೆಯರು ಉಪಸ್ಥಿತರಿದ್ದರು.



"ಮುಂಜಾನೆಯ ಮೆರಗು"

ಜಗಳೂರು ಸೆ, 24– ಸಿರಿಗೆರೆಯಲ್ಲಿ ಗುರುವಾರ ನಡೆದ ವಿಶೇಷ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಜಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಬಿ. ದೇವೇಂದ್ರಪ್ಪ ಅವರನ್ನು ಸಿರಿಗೆರೆ ಮಠದ ಶ್ರೀಗಳು ಆತ್ಮೀಯವಾಗಿ ಸನ್ಮಾನಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ, ವಿವಿಧ ಸಚಿವರು, ಗಣ್ಯರು ಹಾಗೂ ಕಾಂಗ್ರೆಸ್ ಮುಖಂಡ ಸೊಕ್ಕೆ ತಿಪ್ಪೇಸ್ವಾಮಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಬಳ್ಳಿ ಬೆಳೆದು ಹೂ–ಕಾಯಿ ಇಲ್ಲ: ಸಿಹಿ ಕುಂಬಳ ಬೆಳೆದ ರೈತ ಮಹಿಳೆಗೆ ಸಂಕಷ್ಟ

"ಮುಂಜಾನೆಯ ಮೆರಗು"

ಜಗಳೂರು ಸೆ, 24– ಸಮೃದ್ಧವಾಗಿ ಬೆಳೆದ ಸಿಹಿ ಕುಂಬಳದ ಬಳ್ಳಿ, ಆದರೆ ಹೂವೂ ಇಲ್ಲ, ಕಾಯಿಯೂ ಇಲ್ಲ. ಸಾಲ ಮಾಡಿ ಎರಡು ಎಕರೆಗೂ ಹೆಚ್ಚು ಜಮೀನಿನಲ್ಲಿ ಸಿಹಿ ಕುಂಬಳ ಬೆಳೆದ ರೈತ ಮಹಿಳೆಗೆ ಇದೀಗ ಬೆಳೆಯ ಸ್ಥಿತಿ ತಲೆನೋವಾಗಿ ಪರಿಣಮಿಸಿದೆ.

ತಾಲೂಕಿನ ನಿಬಗೂರು ಗ್ರಾಮದ ರೈತ ಮಹಿಳೆ ರೇಖಾ ಅವರು ತಮ್ಮ 2 ಎಕರೆ 30 ಗುಂಟೆ ಜಮೀನಿನಲ್ಲಿ ಸಿಹಿ ಕುಂಬಳ ಬಿತ್ತನೆ ಮಾಡಿ ಮೂರು ತಿಂಗಳು ಕಳೆದಿವೆ. ನಿರೀಕ್ಷೆಯಂತೆ ಬೆಳೆ ಅಭಿವೃದ್ಧಿಯಾಗುವ ಬದಲು ಜಮೀನಿನಲ್ಲಿ ಸಿಹಿ ಕುಂಬಳದ ಬಳ್ಳಿಗಳು ಸಮೃದ್ಧವಾಗಿ ಬೆಳೆದಿದ್ದು, ಇದುವರೆಗೆ ಹೂವು ಹಾಗೂ ಕಾಯಿಗಳು ಕಾಣಿಸಿಕೊಳ್ಳದಿರುವುದು ರೈತರ ಆತಂಕಕ್ಕೆ ಕಾರಣವಾಗಿದೆ.

ಸಾಮಾನ್ಯವಾಗಿ ಬಿತ್ತನೆ ಮಾಡಿದ ಸುಮಾರು 90 ದಿನಗಳ ಅವಧಿಯಲ್ಲಿ ಸಿಹಿ ಕುಂಬಳದ ಬೆಳೆ ಫಲ ನೀಡುವ ಹಂತಕ್ಕೆ ಬರಬೇಕಿತ್ತು. ಆದರೆ ರೇಖಾ ಅವರ ಜಮೀನಿನಲ್ಲಿ ಬಳ್ಳಿಗಳು ಮಾತ್ರ ಉತ್ತಮವಾಗಿ ಬೆಳೆದಿದ್ದು, ಹೂವು ಮತ್ತು ಕಾಯಿ ಬಿಡದಿರುವುದರಿಂದ ಬೆಳೆ ನಿರ್ವಹಣೆ ಹಾಗೂ ಮುಂದಿನ ಕ್ರಮದ ಬಗ್ಗೆ ರೈತರು ಗೊಂದಲಕ್ಕೊಳಗಾಗಿದ್ದಾರೆ.



ಗುಣಮಟ್ಟದ ಬೀಜದ ಬಗ್ಗೆ ಅನುಮಾನ

ಬಿತ್ತನೆಗೆ ಬಳಸಿದ ಬೀಜದ ಗುಣಮಟ್ಟದ ಬಗ್ಗೆ ರೈತ ಮಹಿಳೆ ಅನುಮಾನ ವ್ಯಕ್ತಪಡಿಸಿದ್ದಾರೆ. "ಗುಣಮಟ್ಟದ ಬೀಜದ ಕೊರತೆಯಿಂದಲೇ ಈ ರೀತಿಯ ಸಮಸ್ಯೆ ಎದುರಾಗಿರಬಹುದು" ಎಂಬ ಶಂಕೆಯನ್ನು ಅವರು ವ್ಯಕ್ತಪಡಿಸಿದ್ದಾರೆ. ಆದರೆ ಸಮಸ್ಯೆಗೆ ನಿಖರ ಕಾರಣವೇನು ಎಂಬುದನ್ನು ಕೃಷಿ ಇಲಾಖೆ ಅಥವಾ ಕೃಷಿ ತಜ್ಞರು ಪರಿಶೀಲಿಸಿ ತಿಳಿಸಬೇಕಾಗಿದೆ.

"ಸಾಲ–ಸೂಲ ಮಾಡಿ ಜಮೀನಿನಲ್ಲಿ ಸಿಹಿ ಕುಂಬಳ ಬಿತ್ತನೆ ಮಾಡಿದ್ದೇವೆ. ಬೆಳೆ ಚೆನ್ನಾಗಿ ಬರುತ್ತದೆ, ಉತ್ತಮ ಆದಾಯ ಸಿಗುತ್ತದೆ ಎಂಬ ನಿರೀಕ್ಷೆಯಿತ್ತು. ಆದರೆ ಮೂರು ತಿಂಗಳು ಕಳೆದರೂ ಬಳ್ಳಿಗಳು ಮಾತ್ರ ಬೆಳೆದಿದ್ದು, ಹೂವು ಮತ್ತು ಕಾಯಿ ಬಿಡುತ್ತಿಲ್ಲ. ಇದರಿಂದ ಮಾಡಿದ ಖರ್ಚು ವಾಪಸ್ ಬರುತ್ತದೆಯೇ ಎಂಬ ಆತಂಕ ಎದುರಾಗಿದೆ" ಎಂದು ರೈತ ಮಹಿಳೆ ರೇಖಾ ಅಳಲು ತೋಡಿಕೊಂಡಿದ್ದಾರೆ.

ಪರಿಶೀಲನೆಗೆ ಆಗ್ರಹ

ಬೀಜ ಮೊಳಕೆಯೊಡೆದು ಬಳ್ಳಿಗಳು ಉತ್ತಮವಾಗಿ ಬೆಳೆದಿದ್ದರೂ ಹೂವು ಮತ್ತು ಕಾಯಿಗಳು ಬಾರದಿರುವುದಕ್ಕೆ ಕಾರಣವೇನು ಎಂಬುದನ್ನು ಸಂಬಂಧಪಟ್ಟ ಕೃಷಿ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

ಬೀಜದ ಗುಣಮಟ್ಟ, ಮಣ್ಣಿನ ಗುಣಧರ್ಮ, ಪೋಷಕಾಂಶಗಳ ಕೊರತೆ, ನೀರಿನ ನಿರ್ವಹಣೆ ಸೇರಿದಂತೆ ಬೆಳೆಯ ಮೇಲೆ ಪರಿಣಾಮ ಬೀರುವ ಅಂಶಗಳನ್ನು ಪರಿಶೀಲಿಸಿ ರೈತರಿಗೆ ಸೂಕ್ತ ಸಲಹೆ ನೀಡಬೇಕಿದೆ. ಬೀಜದ ಗುಣಮಟ್ಟದಲ್ಲಿ ಸಮಸ್ಯೆ ಕಂಡುಬಂದರೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಂಡು ರೈತರಿಗೆ ನ್ಯಾಯ ಒದಗಿಸಬೇಕು ಎಂಬುದು ರೈತರ ಆಗ್ರಹವಾಗಿದೆ.

ಸಾಲ ಮಾಡಿ ಬೆಳೆ ಬೆಳೆದ ರೈತರಿಗೆ ನಿರೀಕ್ಷಿತ ಫಲ ಸಿಗದಿದ್ದರೆ ಆರ್ಥಿಕ ಸಂಕಷ್ಟ ಮತ್ತಷ್ಟು ಹೆಚ್ಚುವ ಸಾಧ್ಯತೆ ಇದೆ. ಆದ್ದರಿಂದ ಕೃಷಿ ಇಲಾಖೆ ಅಧಿಕಾರಿಗಳು ನಿಬಗೂರು ಗ್ರಾಮಕ್ಕೆ ಭೇಟಿ ನೀಡಿ ಬೆಳೆ ಪರಿಶೀಲಿಸಿ, ಹೂ–ಕಾಯಿ ಬಿಡದಿರುವುದಕ್ಕೆ ವೈಜ್ಞಾನಿಕ ಕಾರಣ ಪತ್ತೆಹಚ್ಚಿ ಪರಿಹಾರೋಪಾಯ ಸೂಚಿಸಬೇಕಿದೆ.

ಬಗೆಹರಿಯದ ಆಧಾರ್ ಸಮಸ್ಯೆ: ಕೇಂದ್ರದ ಮುಂದೆ ಜನಜಂಗುಳಿ

"ಮುಂಜಾನೆಯ ಮೆರಗು"

ಜಗಳೂರು, ಸೆ.24– ಪಡಿತರ ಚೀಟಿಗೆ ಇ–ಕೆವೈಸಿ ಮಾಡಿಸುವ ಪ್ರಕ್ರಿಯೆಗೆ ಆಧಾರ್ ವಿವರಗಳನ್ನು ನವೀಕರಿಸುವುದು ಅಗತ್ಯವಾಗಿರುವ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಆಧಾರ್ ಸೇವೆ ಪಡೆಯಲು ಸಾರ್ವಜನಿಕರು ಪರದಾಡುವಂತಾಗಿದೆ. ಕಳೆದ ಒಂದು ವಾರದಿಂದ ಪಟ್ಟಣದ ತಾಲೂಕು ಕಚೇರಿ ಆವರಣದಲ್ಲಿರುವ ಆಧಾರ್ ಕೇಂದ್ರದ ಮುಂದೆ ನೂರಾರು ಜನರು ಸರತಿ ಸಾಲಿನಲ್ಲಿ ನಿಂತು ಸೇವೆ ಪಡೆಯಲು ಕಾಯುತ್ತಿರುವ ದೃಶ್ಯ ಕಂಡುಬರುತ್ತಿದೆ.

ವಿಶೇಷವಾಗಿ ಐದು ವರ್ಷ ಮೇಲ್ಪಟ್ಟ ಮಕ್ಕಳ ಆಧಾರ್ ವಿವರಗಳನ್ನು ನವೀಕರಿಸುವುದು ಸೇರಿದಂತೆ, ಆಧಾರ್‌ನಲ್ಲಿ ಮೊಬೈಲ್ ಸಂಖ್ಯೆ, ವಿಳಾಸ, ಬಯೋಮೆಟ್ರಿಕ್ ಹಾಗೂ ಇತರೆ ಅಗತ್ಯ ಮಾಹಿತಿಗಳನ್ನು ನವೀಕರಿಸಿಕೊಳ್ಳಲು ಸಾರ್ವಜನಿಕರು ಕೇಂದ್ರಗಳಿಗೆ ಬರುತ್ತಿದ್ದಾರೆ. ಪಡಿತರ ಚೀಟಿಯ ಇ–ಕೆವೈಸಿ ಪ್ರಕ್ರಿಯೆಗೆ ಆಧಾರ್ ನವೀಕರಣದ



ಅಗತ್ಯವಿರುವುದರಿಂದ ಇತ್ತೀಚಿನ ದಿನಗಳಲ್ಲಿ ಆಧಾರ್ ಕೇಂದ್ರಗಳ ಮೇಲೆ ಒತ್ತಡ ಮತ್ತಷ್ಟು ಹೆಚ್ಚಾಗಿದೆ.

ಜಗಳೂರು ಪಟ್ಟಣದಲ್ಲಿ ತಾಲೂಕು ಕಚೇರಿ ಹೊರತುಪಡಿಸಿ ಅಂಚೆ ಕಚೇರಿ ಹಾಗೂ ಬಿಎಸ್‌ಎನ್‌ಎಲ್ ಕಚೇರಿಗಳಲ್ಲಿಯೂ ಆಧಾರ್ ಸೇವಾ ಕೇಂದ್ರಗಳಿದ್ದರೂ, ಸಾರ್ವಜನಿಕರ ಅಗತ್ಯಕ್ಕೆ ಅನುಗುಣವಾಗಿ ಸೇವೆ ದೊರೆಯುತ್ತಿಲ್ಲ ಎಂಬ ಆರೋಪಗಳು ಕೇಳಿಬರುತ್ತಿವೆ. ಕೆಲವು ಕೇಂದ್ರಗಳಲ್ಲಿ ಸಮರ್ಪಕವಾಗಿ ಸೇವೆ ಲಭ್ಯವಾಗದ ಕಾರಣ ಹೆಚ್ಚಿನ ಸಂಖ್ಯೆಯ ಜನರು ತಾಲೂಕು ಕಚೇರಿ ಆವರಣದಲ್ಲಿರುವ ಆಧಾರ್ ಕೇಂದ್ರದತ್ತ ಮುಖ ಮಾಡುತ್ತಿದ್ದಾರೆ.

ಇದರಿಂದ ಒಂದೇ ಕೇಂದ್ರದ ಮೇಲೆ ಹೆಚ್ಚಿನ ಹೊರೆ ಬಿದ್ದಿದ್ದು, ಬೆಳಗ್ಗೆಯಿಂದಲೇ ಜನರು ಸರತಿ ಸಾಲಿನಲ್ಲಿ ನಿಲ್ಲಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಮಹಿಳೆಯರು, ವೃದ್ಧರು ಹಾಗೂ ಚಿಕ್ಕ ಮಕ್ಕಳೊಂದಿಗೆ ಬರುವ ಪೋಷಕರು ಗಂಟೆಗಟ್ಟಲೆ ಕಾಯಬೇಕಾಗುತ್ತಿದೆ. ದೂರದ ಗ್ರಾಮಗಳಿಂದ ಬರುವವರು ಒಂದೇ ದಿನದಲ್ಲಿ ಕೆಲಸವಾಗದೆ ಮತ್ತೊಮ್ಮೆ ಪಟ್ಟಣಕ್ಕೆ ಬರಬೇಕಾದ ಅನಿವಾರ್ಯತೆಯೂ ಎದುರಾಗಿದೆ.

ಆಧಾರ್ ನವೀಕರಣಕ್ಕಾಗಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಿರುವುದನ್ನು ಗಮನಿಸಿ, ಪಟ್ಟಣದಲ್ಲಿರುವ ಎಲ್ಲ ಆಧಾರ್ ಸೇವಾ ಕೇಂದ್ರಗಳಲ್ಲಿ ಸಮರ್ಪಕವಾಗಿ ಸೇವೆ ಒದಗಿಸುವಂತೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಅಗತ್ಯವಿದ್ದಲ್ಲಿ ಹೆಚ್ಚುವರಿ ಸಿಬ್ಬಂದಿ ನಿಯೋಜಿಸಿ, ತಾತ್ಕಾಲಿಕವಾಗಿ ಹೆಚ್ಚುವರಿ ಕೌಂಟರ್‌ಗಳನ್ನು ತೆರೆಯುವ ಮೂಲಕ ಜನರ ಮೇಲಿನ ಒತ್ತಡ ಕಡಿಮೆ ಮಾಡಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಆಧಾರ್ ಸೇವಾ ಕೇಂದ್ರಗಳ ಸಂಖ್ಯೆ ಹೆಚ್ಚಿಸಿ, ಸೇವೆಯನ್ನು ಸಮರ್ಪಕಗೊಳಿಸುವ ಮೂಲಕ ಜನರು ಗಂಟೆಗಟ್ಟಲೆ ಸರತಿ ಸಾಲಿನಲ್ಲಿ ನಿಲ್ಲುವ ಪರಿಸ್ಥಿತಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂಬುದು ಸಾರ್ವಜನಿಕರ ಆಗ್ರಹವಾಗಿದೆ.

Editor, Publisher & Owner of the News Paper: RAVIKUMARA J.O, MUNJANEYA MERAGU, JCR BADAVANE, Jagalur- 577-528, Davanagere (D)Karnataka, Printed by: MALLIKARJUNAPPA H G. Printed at: SHIVA MEDIA HOUSE, No.900/A2, Opp-Banashankari Temple Arch, Main Roan, Davanagere, Karnataka-577004.

ವಿಬಿ–ಜಿರಾಮ್ಜಿ ಯೋಜನೆಯಡಿ 1.60 ಕೋಟಿ ಮಾನವ ದಿನಗಳ ಸೃಷ್ಟಿ



"ಮುಂಜಾನೆಯ ಮೆರಗು"


ಬೆಂಗಳೂರು,ಸೆ.24– ರಾಜ್ಯದಲ್ಲಿ ತೀವ್ರ ಬರ ಪರಿಸ್ಥಿತಿ ಇರುವುದರಿಂದ ವಿಬಿ–ಜಿರಾಮ್ಜಿ ಯೋಜನೆಯಡಿ 1.60 ಕೋಟಿ ಮಾನವ ದಿನಗಳನ್ನು ಸೃಷ್ಟಿಸಲಾಗುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಈಶ್ವರಖಂಡ್ರೆ ವಿಧಾನಸಭೆಗೆ ತಿಳಿಸಿದರು. ಬರ ಕುರಿತ ವಿಶೇಷ ಚರ್ಚೆಯಲ್ಲಿ ಬಿಜೆಪಿ ಶಾಸಕ ವಿ.ಸುನೀಲ್ಕುಮಾರ್ರವರು ವಿಬಿ–ಜಿರಾಮ್ಜಿ ಯೋಜನೆಯನ್ನು ದೊಡ್ಡ ಪ್ರಮಾಣದಲ್ಲಿ ಬಳಸಿಕೊಳ್ಳಲು ಸಮರೋಪಾದಿಯಲ್ಲಿ ಸಿದ್ಧತೆ ಮಾಡಿಕೊಳ್ಳಬೇಕಿತ್ತು. ಆದರೆ ಆ ಕಾರ್ಯವಾಗಿಲ್ಲ ಎಂದು ಆಕ್ಷೇಪಿಸಿದರು.

ಆಗ ಮಧ್ಯಪ್ರವೇಶಿಸಿದ ಸಚಿವರು, ಕೃಷಿ ಹೊಂಡ, ಚೆಕ್ ಡ್ಯಾಂ ನಿರ್ಮಾಣ, ಕೆರೆಗಳ ಹೂಳೆತ್ತುವುದು, ಕೆರೆಗಳ ಪುನಶ್ಚೇತನ, ಅಂತರ್ಜಲ ಹೆಚ್ಚಳದಂತಹ ಕಾಮಗಾರಿಗಳು ಸೇರಿದಂತೆ 318 ಕಾಮಗಾರಿಗಳನ್ನು ಈ ವರ್ಷ ವಿಬಿ–ಜಿರಾಮ್ಜಿ ಯೋಜನೆಯಡಿ ಕೈಗೊಳ್ಳಲಾಗುತ್ತಿದೆ. 2,900 ಕೋಟಿ ರೂ.ಗಳನ್ನು ಇದಕ್ಕಾಗಿ ಒದಗಿಸಲಾಗುತ್ತಿದೆ. 1 ಸಾವಿರ ಕೋಟಿ ರೂ.ಗಳನ್ನು ಜಿಲ್ಲೆಗಳಿಗೆ ಮುಂಗಡವಾಗಿ ನೀಡಲಾಗಿದೆ.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ತಲಾ 1,700 ಕೋಟಿ ರೂ.ಗಳನ್ನು ಬಳಸಲಾಗುತ್ತಿದೆ. ಮನ್ರೇಗಾ ಯೋಜನೆಯನ್ನು ಬದಲಾಯಿಸಿ ಕೇಂದ್ರ ಸರ್ಕಾರ ನೀಡುವ ಅನುದಾನವನ್ನು ಕಡಿತಗೊಳಿಸಿದೆ. ಆದರೆ ಯಾರೂ ಗುಳೆ ಹೋಗದಂತೆ ರಾಜ್ಯ ಸರ್ಕಾರ ಜನರಿಗೆ ಉದ್ಯೋಗ ನೀಡಲು ಕ್ರಮ ಕೈಗೊಂಡಿದ್ದು ಎಸ್ಓಪಿಯನ್ನು ಬಿಡುಗಡೆ ಮಾಡಲಾಗಿದೆ. ಹೀಗಾಗಿ ಪೂರ್ವ ಸಿದ್ಧತೆ ಮಾಡಿಕೊಂಡಿಲ್ಲ ಎಂಬ ಆರೋಪ ಸರಿಯಲ್ಲ ಎಂದರು.

ಈ ಯೋಜನೆಯಡಿ ಹಣ ಬಿಡುಗಡೆ ಕುರಿತಂತೆ ದೂರುಗಳು ಇದ್ದು, ಅವುಗಳನ್ನು ಸರಿಪಡಿಸಿದ ನಂತರ ಹಣ ಮಂಜೂರಾಗುತ್ತದೆ ಎಂದರು. ಮಧ್ಯಪ್ರವೇಶಿಸಿದ ಬಿ.ಆರ್.ಪಾಟೀಲ್ರವರು ಗುಜರಾತ್ ಮತ್ತು ರಾಜಸ್ಥಾನ ಸರ್ಕಾರಗಳು ಈ ಯೋಜನೆ ಅನುಷ್ಠಾನಕ್ಕೆ ಹಿಂದೇಟು ಹಾಕಲು ಕಾರಣವೇನು? ಎಂದು ಪ್ರಶ್ನಿಸಿದರು. ಆಗ ಸಚಿವರು ಆ ರಾಜ್ಯಗಳು ಈ ಯೋಜನೆಯನ್ನು ಒಪ್ಪಿ ಅನುಷ್ಠಾನಗೊಳಿಸುತ್ತಿಲ್ಲ ಎಂದು ಹೇಳಿದರು.

ರೌಡಿಗಳೊಂದಿಗೆ ಎಣ್ಣೆ ಪಾರ್ಟಿ ಮಾಡಿದ ಎಎಸ್ಐ ಅಮಾನತು



"ಮುಂಜಾನೆಯ ಮೆರಗು"

ಚಿಕ್ಕಮಗಳೂರು,ಸೆ.24– ರೌಡಿ ಶೀಟರ್ಗಳ ಜೊತೆ ಸೇರಿ ಮದ್ಯಪಾನ ಕೂಟ ಆಯೋಜಿಸಿದ್ದ ಹಿನ್ನೆಲೆಯಲ್ಲಿ ಕಡೂರು ತಾಲೂಕಿನ ಸಖರಾಯಪಟ್ಟಣ ಪೊಲೀಸ್ ಠಾಣೆಯ ಸಹಾಯಕ ಸಬ್ ಇನ್ಸ್ಪೆಕ್ಟರ್ ವೀರೇಂದ್ರ ನನ್ನು ಅಮಾನತು ಮಾಡಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿತೇಂದ್ರ ಕುಮಾರ್ ದಯಾಮ ಆದೇಶ ಹೊರಡಿಸಿದ್ದಾರೆ.

ಘಟನೆಯ ವಿವರ: ಸುಮಾರು ಒಂದು ವಾರದ ಹಿಂದೆ ಕಡೂರು ತಾಲೂಕಿನ ಎಮೆದೊಡ್ಡಿ ಸಮೀಪದ ಮುಸ್ಲಾಪುರ ಗ್ರಾಮದ ಬಾರ್ವೊಂದರಲ್ಲಿ ಎಎಸ್ಐ ವೀರೇಂದ್ರ ರೌಡಿ ಶೀಟರ್ಗಳೊಂದಿಗೆ ಪಾರ್ಟಿ ಆಯೋಜಿಸಿದ್ದರು. ಅಷ್ಟೇ ಅಲ್ಲದೆ, ತಡರಾತ್ರಿಯವರೆಗೂ ದೊಡ್ಡ ಶಬ್ದದಲ್ಲಿ ಹಾಡುಗಳನ್ನು ಹಾಕಿಕೊಂಡು ಮೋಜು–ಮಸ್ತಿಯಲ್ಲಿ ತೊಡಗಿದ್ದರು.

ಪೋಲೀಸ್ ಅಧಿಕಾರಿಯ ಈ ದುಂಡಾವರ್ತನೆಯಿಂದ ಆಕ್ರೋಶಗೊಂಡ ಸ್ಥಳೀಯ ಗ್ರಾಮಸ್ಥರು ಹಾಗೂ ನೂರಾರು ಮಹಿಳೆಯರು ತಡರಾತ್ರಿಯೇ ಬಾರ್ ಎದುರು ಧರಣಿ ಕುಳಿತರು. ನಿಗದಿತ ಸಮಯ ಮೀರಿದರೂ ತೆರೆದಿದ್ದ ಬಾರ್ ಅನ್ನು ತಕ್ಷಣವೇ ಬಂದ್ ಮಾಡಬೇಕೆಂದು ಪಟ್ಟು ಹಿಡಿದು ಭಾರಿ ಪ್ರತಿಭಟನೆ ನಡೆಸಿದರು.

ಸಾರ್ವಜನಿಕರ ರಕ್ಷಣೆ ಮಾಡಬೇಕಾದ ಅಧಿಕಾರಿಯೇ ಅಕ್ರಮ ಚಟುವಟಿಕೆಯಲ್ಲಿ ಭಾಗಿಯಾಗಿರುವುದರ ವಿರುದ್ಧ ಸ್ಥಳೀಯರಿಂದ ತೀವ್ರ ಆಕ್ರೋಶ ವ್ಯಕ್ತವಾಗಿತ್ತು.

ಜೊತೆಗೆ ಈ ಎಎಸ್ಐ ವಿರುದ್ಧ ನಿರಂತರವಾಗಿ ದೂರುಗಳು ಕೇಳಿಬರುತ್ತಿದ್ದವು. ಸಾರ್ವಜನಿಕರ ಭಾರಿ ಪ್ರತಿಭಟನೆ ಮತ್ತು ದೂರುಗಳನ್ನು ಗಂಭೀರವಾಗಿ ಪರಿಗಣಿಸಿದ ಎಸ್ಪಿ ಜಿತೇಂದ್ರ ಕುಮಾರ್ ಎಎಸ್ಐ ವೀರೇಂದ್ರ ನನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ಸಸ್ಪೆಂಡ್ ಮಾಡಿ ಆದೇಶ ಹೊರಡಿಸಿದ್ದಾರೆ.

ತಮಿಳುನಾಡಿಗೆ ಕಾವೇರಿ ನೀರು; ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸುತ್ತೇವೆ : ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್



"ಮುಂಜಾನೆಯ ಮೆರಗು"

ಚಿತ್ರದುರ್ಗ, ಸೆ.24– "ತಮಿಳುನಾಡಿಗೆ ಕಾವೇರಿ ನೀರು ಬಿಡುವ ವಿಚಾರವಾಗಿ ರಾಜ್ಯ ಸರ್ಕಾರ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಲಿದೆ" ಎಂದು ಡಿ ಕೆ ಶಿವಕುಮಾರ್ ತಿಳಿಸಿದರು.ಚಿತ್ರದುರ್ಗದ ಸಿರಿಗೆರೆ ಮಠದ ಹೆಲಿಪ್ಯಾಡ್ ಬಳಿ ಶಿವಕುಮಾರ್ ಅವರು ಮಾಧ್ಯಮಗಳಿಗೆ ಗುರುವಾರ ಪ್ರತಿಕ್ರಿಯೆ ನೀಡಿದರು."ನೀರಿದ್ದರೆ ಬಿಡುತ್ತೇವೆ. ಆದರೆ ನಮಗೂ ಒಳಹರಿವು ನಿಂತುಹೋಗಿದೆ. ಮಳೆ ಕೂಡ ನಿಂತಿದೆ. ಈ ವಿಚಾರದಲ್ಲಿ ನಮ್ಮ ಮೇಲೆ ಸಾಕಷ್ಟು ಒತ್ತಡವಿದೆ. ನೀರಿನ ಪರಿಸ್ಥಿತಿಯನ್ನು ಪರಿಶೀಲಿಸಿ, ನೀರಾವರಿ ಸಚಿವರೊಂದಿಗೆ ಚರ್ಚಿಸಿದ ಬಳಿಕ ಮುಂದಿನ ಕ್ರಮದ ಬಗ್ಗೆ ತಿಳಿಸುತ್ತೇನೆ" ಎಂದು ಹೇಳಿದರು.

ರೈತರ ಹಿತ ಕಾಪಾಡುತ್ತೇವೆ

"ರಾಜ್ಯದಲ್ಲಿ ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ರೈತರಿಗೆ ಯಾವ ರೀತಿಯಲ್ಲಿ ನೆರವು ನೀಡಬೇಕು ಹಾಗೂ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಯಾವ ರೀತಿಯ ಸಹಕಾರ ಅಗತ್ಯವಿದೆ ಎಂಬುದರ ಕುರಿತು ರೂಪುರೇಷೆ ಸಿದ್ಧಪಡಿಸಬೇಕಾಗಿದೆ. ಈ ವಿಚಾರಗಳ ಕುರಿತು ವಿಧಾನಸಭೆಯಲ್ಲಿಯೂ ಚರ್ಚೆ ನಡೆದಿದೆ. ಸರ್ಕಾರ ಅಗತ್ಯ ಕ್ರಮಗಳ ಬಗ್ಗೆ ಚರ್ಚಿಸಲಿದೆ" ಎಂದರು."ಸರ್ವಪಕ್ಷ ನಿಯೋಗದೊಂದಿಗೆ ಕೇಂದ್ರ ಸರ್ಕಾರದ ಗಮನ ಸೆಳೆಯುವ ವಿಚಾರದಲ್ಲಿ ವಿರೋಧ ಪಕ್ಷದ ನಾಯಕರು ಸಹಕಾರ ನೀಡುತ್ತಿರುವುದಕ್ಕೆ ಅಭಿನಂದನೆ ಸಲ್ಲಿಸುತ್ತೇನೆ" ಎಂದರು.

"ಕಸ್ತೂರಿ ರಂಗನ್ ವರದಿ ಹಾಗೂ ಪಶ್ಚಿಮ ಘಟ್ಟಗಳ ಸಂರಕ್ಷಣೆಗೆ ಸಂಬಂಧಿಸಿದ ವಿಚಾರದಲ್ಲಿ ಮಲೆನಾಡು ಮತ್ತು ಕರಾವಳಿ ಭಾಗದ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ರಾಜ್ಯ ಸರ್ಕಾರ ಕೈಗೊಂಡಿರುವ ನಿರ್ಣಯಕ್ಕೆ ವಿವಿಧ ಪಕ್ಷಗಳ ನಾಯಕರು ಸಹಮತ ವ್ಯಕ್ತಪಡಿಸಿದ್ದಾರೆ. ಸರ್ಕಾರ ರೈತರ ಹಿತಕ್ಕಾಗಿ ಕೆಲಸ ಮಾಡುತ್ತಿದೆ. ನಮ್ಮ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಿದ್ದೇವೆ. ರಾಜ್ಯದ ಜನರು ನಮ್ಮ ಮೇಲೆ ನಂಬಿಕೆ ಇಟ್ಟಿದ್ದಾರೆ. ಆ ನಂಬಿಕೆ ಉಳಿಸಿಕೊಂಡು ಜನಹಿತ ಕಾಪಾಡುವ ಕೆಲಸ ಮಾಡುತ್ತಿದ್ದೇವೆ" ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳು ಬಡವರ ಪರವಾಗಿವೆ

ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಬಗ್ಗೆ ಬಿಜೆಪಿ ನಾಯಕರ ಹೇಳಿಕೆ ಬಗ್ಗೆ ಕೇಳಿದಾಗ, "ಗ್ಯಾರಂಟಿ ಯೋಜನೆಗಳನ್ನು ಪರಿಷ್ಕರಿಸಿ, ಸೌಲಭ್ಯಗಳನ್ನು ಬಡವರಿಗೆ ಮಾತ್ರ ನೀಡುವಂತೆ ಬಿಜೆಪಿ ಶಾಸಕ ಸುರೇಶ್ ಗೌಡ ಸೇರಿದಂತೆ ಕೆಲವು ವಿರೋಧ ಪಕ್ಷಗಳ ಶಾಸಕರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ವಿವಿಧ ನಾಯಕರಿಗೆ ತಮ್ಮದೇ ಆದ ಅಭಿಪ್ರಾಯಗಳಿವೆ. ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲು ಸಾಧ್ಯವಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಬಿಜೆಪಿಯ ಹಲವು ಕೇಂದ್ರ ಸಚಿವರು ಹಾಗೂ ನಾಯಕರು ಈ ಹಿಂದೆ ಹೇಳಿದ್ದರೂ, ರಾಜ್ಯ ಸರ್ಕಾರ ಮಾತ್ರ ಬಡವರ ಪರವಾಗಿ ನೆರವು ನೀಡುವ ಕಾರ್ಯವನ್ನು ಮುಂದುವರಿಸಲಿದೆ" ಎಂದರು.

ಕೆಪಿಎಸ್ಸಿ ಪರೀಕ್ಷೆ: ಅರ್ಹರಿಗೆ ನ್ಯಾಯ ಸಿಗಬೇಕು

ಕೆಪಿಎಸ್ ಸಿ ವಿಚಾರವಾಗಿ ಕೇಳಿದ ಪ್ರಶ್ನೆಗೆ, "ಕೆಪಿಎಸ್ಸಿ ವಿಚಾರದಲ್ಲಿಯೂ ಹಲವು ಹಿರಿಯ ನಾಯಕರು ತಮ್ಮ ಅಭಿಪ್ರಾಯಗಳನ್ನು ಸರ್ಕಾರದ ಗಮನಕ್ಕೆ ತಂದಿದ್ದಾರೆ. ಉಗ್ರಪ್ಪ, ಬಿ ಎಲ್ ಶಂಕರ್, ಸುದರ್ಶನ್, ರಾಣಿ ಸತೀಶ್ ಸೇರಿದಂತೆ ಸುಮಾರು 20–30 ಮಂದಿ ನಾಯಕರು ಈ ಕುರಿತು ತಮ್ಮ ಅಭಿಪ್ರಾಯ ತಿಳಿಸಿದ್ದಾರೆ. ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರ ಹೇಳಿಕೆಯನ್ನೂ ಗಮನಿಸಿದ್ದೇನೆ" ಎಂದು ಹೇಳಿದರು.

"ಕೆಪಿಎಸ್ಸಿ ನೇಮಕಾತಿ ಹಾಗೂ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಕಾನೂನು ಚೌಕಟ್ಟನ್ನು ಪರಿಶೀಲಿಸಲಾಗುವುದು. ಪರೀಕ್ಷೆ ನಡೆಸುವ ಅಧಿಕಾರಿಗಳು ಹಾಗೂ ಸದಸ್ಯರು ಯಾವುದೇ ಒತ್ತಡಕ್ಕೆ ಒಳಗಾಗದೆ ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸುವುದು ಮುಖ್ಯ. ಒತ್ತಡಗಳನ್ನು ಮೀರಿ ಸ್ಪರ್ಧಾತ್ಮಕವಾಗಿ ಪರೀಕ್ಷೆ ಬರೆದು ಉತ್ತಮ ಅಂಕ ಗಳಿಸಿರುವವರಿಗೆ ನ್ಯಾಯ ಸಿಗಬೇಕು. ಪರೀಕ್ಷೆ ಮತ್ತು ಸಂದರ್ಶನವನ್ನು ಪರಿಶುದ್ಧವಾಗಿ ನಡೆಸುವುದು ಸಂಬಂಧಪಟ್ಟವರ ಜವಾಬ್ದಾರಿ. ಹಿಂದೆ ನಡೆದಿರುವ ಹಲವು ಘಟನೆಗಳ ಹಿನ್ನೆಲೆಯಲ್ಲಿ ಈ ಬಗ್ಗೆ ಕೆಲವರು ಸಲಹೆಗಳನ್ನು ನೀಡಿದ್ದಾರೆ. ಕಾನೂನು ಚೌಕಟ್ಟಿನಲ್ಲಿ ಎಲ್ಲವನ್ನೂ ಪರಿಶೀಲಿಸಿ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು" ಎಂದು ಹೇಳಿದರು.

"ವಿಧಾನ ಪರಿಷತ್ ಚುನಾವಣೆ ಇರುವ ಕಾರಣಕ್ಕೆ ಚುನಾವಣಾ ಆಯೋಗ ದಿನಾಂಕ ನಿಗದಿಪಡಿಸಿದೆ. ಈ ಹಿನ್ನೆಲೆಯಲ್ಲಿ ಸರ್ಕಾರಿ ಕಾರ್ಯಕ್ರಮಗಳನ್ನು ರದ್ದುಪಡಿಸಲಾಗಿದೆ. ಹಿರಿಯೂರು ಹಾಗೂ ಚಿತ್ರದುರ್ಗ ಭಾಗದಲ್ಲಿ ನಡೆದಿರುವ ಭದ್ರಾ ಮೇಲ್ದಂಡೆ ಕಾಮಗಾರಿಗಳು ಮತ್ತು ನೀರು ಹರಿಸಿದ ಹಿನ್ನೆಲೆಯಲ್ಲಿ ರೈತರು ಅಭಿನಂದನಾ ಕಾರ್ಯಕ್ರಮ ಆಯೋಜಿಸಿದ್ದರು" ಎಂದರು.

ಬಂಗಾರಪೇಟೆ ಕಾರು ಅಪಘಾತ, ಪುಣೆ ಮೂಲದ ನಾಲ್ವರ ಸಾವು



"ಮುಂಜಾನೆಯ ಮೆರಗು"

ಬೆಂಗಳೂರು, ಸೆ.24– ಬಂಗಾರಪೇಟೆ ಪೋಲಿಸ್ ಠಾಣೆ ವ್ಯಾಪ್ತಿಯ ಮರಗಲ್ ಗ್ರಾಮದ ಬಳಿ ಇಂದು ಮಧ್ಯಾಹ್ನ ಮಹೇಂದ್ರ ಕಾರು ಸ್ವಯಂ ಅಪಘಾತಕ್ಕೀಡಾಗಿ ಪುಣೆ ಮೂಲದ ನಾಲ್ವರು ಮೃತಪಟ್ಟಿದ್ದಾರೆ.

ಮೃತರನ್ನು ನವನೀತ್ ಗಾಯಕವಾಡ್, ಪವಾರ್ ವಿಶ್ವನಾಥ್, ಕಿರಣ್ ಹಾಗೂ ವಿಶಾಲ್ ಎಂದು ಗುರುತಿಸಲಾಗಿದೆ. ಗಾಯಗೊಂಡಿರುವ ಸೋಮನಾಥ ಕೊಲ್ಲಿ ಅವರನ್ನು ಚಿಕಿತ್ಸೆಗಾಗಿ ಸ್ಥಳೀಯ ಆಸ್ಪತ್ರೆಗೆ ಸೇರಿಸಲಾಗಿದೆ.

ಇವರೆಲ್ಲರೂ ಪುಣೆಯ ನಿವಾಸಿಗಳಾಗಿದ್ದು, ತಿರುಪತಿಗೆ ಕಾರಿನಲ್ಲಿ ಹೋಗುವಾಗ ಮಧ್ಯಾಹ್ನ 1.30ರ ಸಮಯದಲ್ಲಿ ಮರಗಲ್ ಗ್ರಾಮದ ಬಳಿ ಅಪಘಾತ ಉಂಟಾಗಿದೆ.ಸುದ್ದಿ ತಿಳಿದ ಬಂಗಾರಪೇಟೆ ಠಾಣೆ ಪೋಲಿಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ.

ಜೆಡಿಎಸ್ ಮುಖಂಡ ಅಂದಾನಪ್ಪ ಅವರ ಮನೆಯ ಸೆಕ್ಯೂರಿಟಿಗಾರ್ಡ್ ಆತ್ಮ ಹತ್ಯೆ



"ಮುಂಜಾನೆಯ ಮೆರಗು"

ಬೆಂಗಳೂರು, ಸೆ.24– ಜೆಡಿಎಸ್ ಮುಖಂಡರೊಬ್ಬರ ಮನೆಯ ಸೆಕ್ಯೂರಿಟಿ ಗಾರ್ಡ್ ಮನೆಯ ಆವರಣದಲ್ಲಿರುವ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ರಾಜಗೋಪಾಲನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಇಂದು ಬೆಳಗ್ಗೆ ನಡೆದಿದೆ.

ನಾಗರಾಜು (58) ಆತ್ಮಹತ್ಯೆ ಮಾಡಿಕೊಂಡಿರುವ ಸೆಕ್ಯೂರಿಟಿ ಗಾರ್ಡ್. ಮೂಲತಃ ಅರಸೀಕೆರೆಯವರಾದ ಇವರು ಪಾರ್ವತಿ, ಹೇಮಲತಾ ಹಾಗೂ ಶೋಭಾ ಎಂಬ ಮೂವರು ಪತ್ನಿಯರನ್ನು ಹೊಂದಿದ್ದರು. ಪಾರ್ವತಿ ಅವರೊಂದಿಗೆ ಸದ್ಯ ವಾಸವಾಗಿರಲಿಲ್ಲ. ನಾಗರಾಜು ಇಬ್ಬರು ಪತ್ನಿಯರು ಹಾಗೂ ಇಬ್ಬರು ಹೆಣ್ಣುಮಕ್ಕಳೊಂದಿಗೆ ಈ ಹಿಂದೆ ಚಿಕ್ಕಪೇಟೆಯಲ್ಲಿ ವಾಸವಾಗಿದ್ದರು. ಬಳಿಕ ಕುಟುಂಬ ಲಗ್ಗೆರೆಗೆ ಮನೆ ಬದಲಾಯಿಸಿತ್ತು.

ಲಗ್ಗೆರೆ ಮುಖ್ಯರಸ್ತೆಯಲ್ಲಿರುವ ಜೆಡಿಎಸ್ ಮುಖಂಡ ಅಂದಾನಪ್ಪ ಅವರ ಮನೆಯಲ್ಲಿ ನಾಗರಾಜು ಸೆಕ್ಯೂರಿಟಿ ಗಾರ್ಡ್ ಆಗಿ ಕೆಲಸ ಮಾಡುತ್ತಿದ್ದರು.ಎಂದಿನಂತೆ ಇಂದು ಬೆಳಗ್ಗೆ 6 ಗಂಟೆ ಸುಮಾರಿಗೆ ಕೆಲಸಕ್ಕೆ ಅಂದಾನಪ್ಪ ಅವರ ಮನೆಗೆ ಬಂದಿದ್ದ ನಾಗರಾಜು, ಮನೆಯ ಕಾಂಪೌಂಡ್ ಆವರಣದಲ್ಲಿದ್ದ ಸ್ಟಾರ್ ಫ್ರೂಟ್ ಮರಕ್ಕೆ ಶಾಲಿನಿಂದ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಈ ಘಟನೆ ಯಾರ ಗಮನಕ್ಕೂ ಬಂದಿರಲಿಲ್ಲ. ಇದೇ ಮಾರ್ಗದಲ್ಲಿ ಬೆಳಗ್ಗೆ ಶಾಲಾ ಬಸ್ ತೆರಳುತ್ತಿದ್ದಾಗ ಚಾಲಕ ಗಮನಿಸಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.ಸ್ಥಳಕ್ಕೆ ಆಗಮಿಸಿದ ಪೊಲೀಸರು ನೇಣಿನ ಕುಣಿಕೆಯಿಂದ ನಾಗರಾಜು ಅವರನ್ನು ಕೆಳಗಿಳಿಸಿ ಪರಿಶೀಲನೆ ನಡೆಸಿ, ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಿದ್ದಾರೆ. ನಾಗರಾಜು ಆತ್ಮಹತ್ಯೆಗೆ ಕಾರಣ ತಿಳಿದುಬಂದಿಲ್ಲ. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಕಾವೇರಿ ಪ್ರಾಧಿಕಾರದ ಆದೇಶ ಪಾಲಿಸಿ ತಮಿಳುನಾಡಿಗೆ ನೀರು ಹರಿಸುವಂತೆ 'ಸುಪ್ರೀಂ' ಸೂಚನೆ

"ಮುಂಜಾನೆಯ ಮೆರಗು"

ನವದೆಹಲಿ, ಸೆ.24– ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶದಂತೆ ತಮಿಳು ನಾಡಿಗೆ ನೀರು ಹರಿಸುವಂತೆ ರಾಜ್ಯಕ್ಕೆ ಸುಪ್ರೀಂ ಕೋರ್ಟ್ ಸೂಚನೆ ನೀಡಿದೆ. ತಮಿಳುನಾಡಿಗೆ ಕಾವೇರಿ ನೀರು ಹರಿಸುವ ವಿಚಾರದಲ್ಲಿ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶ ಪಾಲಿಸುವಂತೆ ಆದೇಶ ಹೊರಡಿಸಿರುವುದರ ಜೊತೆ ವಿಚಾರಣೆಯನ್ನು ಅ.12ಕ್ಕೆ ಮುಂದೂಡಿದೆ.

ಹಿಂದೆ ಪೂರೈಕೆಯಾಗದ ನೀರಿನ ಕೊರತೆಯನ್ನು ಭರ್ತಿ ಮಾಡಲು ನೀರು ಬಿಡುಗಡೆ ಕೋರಿ ತಮಿಳುನಾಡು ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ವಿಕ್ರಮ್ ನಾಥ್, ನ್ಯಾಯಮೂರ್ತಿ ಸಂದೀಪ್ ಮೆಹ್ತಾ ಮತ್ತು ನ್ಯಾಯಮೂರ್ತಿ ವಿಜಯ್ ಬಿಷ್ಣೋಯ್ ಅವರಿದ್ದ ಪೀಠ ವಿಚಾರಣೆ ನಡೆಸಿತು.

ಮಳೆ ಕೊರತೆಯಿಂದ ಜಲಾಶಯಗಳಲ್ಲಿ ನೀರಿಲ್ಲ. ಬೇಸಿಗೆಯಲ್ಲಿ ನೀರಿನ ಕೊರತೆಯಾಗಲಿದೆ. ಕಳೆದ ವರ್ಷ ಈ ಸಮಯದಲ್ಲಿ 81 ಟಿಎಂಸಿ ನೀರಿತ್ತು. ಈ ವರ್ಷ ನೀರಿನ ಒಳ ಹರಿವಿನಲ್ಲಿ ಭಾರಿ ಕೊರತೆಯಾಗಿದೆ. ನಾವು ಆದೇಶಗಳನ್ನು ವಿರೋಧಿಸುತ್ತೇವೆ ಎಂದು ಕರ್ನಾಟಕ ವಾದಿಸಿತ್ತು.

ತಮಿಳುನಾಡು ನಾವು 4.5 ಲಕ್ಷ ಎಕರೆಯಲ್ಲಿ ಬೆಳೆದ ಬೆಳೆ ಹಾನಿಯಾಗಲಿದೆ. ತಮಿಳುನಾಡಿಗೆ ನೀರಿನ ಅಗತ್ಯವಿದೆ ಎಂದು ಹೇಳಿತು. ನೀರಿನ ಆದೇಶಗಳನ್ನು ಪಾಲಿಸಲು ಸಾಧ್ಯವಾಗುತ್ತಿಲ್ಲ. ಬರ ಪರಿಸ್ಥಿತಿ ಬಂದಾಗ ಪ್ರತಿ ಬಾರಿಯೂ ಹೀಗೆ ಆಗುತ್ತದೆ. ತಜ್ಞರ ಸಮಿತಿ, ಪರಿಸ್ಥಿತಿ ಅವಲೋಕಿಸಿ ನಿರ್ಧಾರ ತೆಗೆದುಕೊಳ್ಳುತ್ತದೆ. ಹೆಚ್ಚುವರಿ ನೀರಿಗೆ ಬೇಡಿಕೆ ಇಟ್ಟಿರುವ ತಮಿಳುನಾಡು ಅರ್ಜಿ ವಜಾ ಮಾಡಬೇಕು ಎಂದು ಕರ್ನಾಟಕ ಮನವಿ ಮಾಡಿತು.

ತಮಿಳುನಾಡು ನೀರಿನ ಕೊರತೆಯಾಗುತ್ತಿದೆ ಎನ್ನುತ್ತಿದೆ ಎಂದು ಸುಪ್ರೀಂ ಕೋರ್ಟ್ ಪ್ರಶ್ನಿಸಿತು. ಕೇವಲ ತಮಿಳುನಾಡು ಅಲ್ಲ, ಇಡೀ ಬೇಸಿನ್ನಲ್ಲಿ ನೀರಿನ ಕೊರತೆ ಇದೆ ಎಂದು ಕರ್ನಾಟಕ ವಾದಿಸಿತು. ಬರ ಇರುವ ಹಿನ್ನೆಲೆ ಬೇಸಿಗೆಯಲ್ಲಿ ಕುಡಿಯುವ ನೀರು, ಪರಿಸರ ಹಾಗೂ ಕೈಗಾರಿಕೆಗಳನ್ನು ಗಮನದಲ್ಲಿಟ್ಟುಕೊಳ್ಳಬೇಕು. ಕರ್ನಾಟಕದಲ್ಲಿ ಮುಂಗಾರು ವಿಫಲವಾಗಿದೆ. ಹಿಂಗಾರು ಮಳೆ ತಮಿಳುನಾಡಿಗೆ ಲಾಭದಾಯಕವಾಗಿದೆ. ಕರ್ನಾಟಕದಲ್ಲಿ ನಾವು ಬರ ಘೋಷಿಸಿದ್ದೇವೆ

ಭೀಕರ ಬರ ಪರಿಸ್ಥಿತಿಯಿಂದ ವಿದ್ಯುತ್ ಅಭಾವ : ಸಿಎಂ ಡಿಕೆಶಿ ಆತಂಕ

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.24– ಮಳೆ ಕೊರತೆಯಿಂದ ದೇಶಾದ್ಯಂತ ಎದುರಾಗಿರುವ ಭೀಕರ ಬರ ಪರಿಸ್ಥಿತಿ ಕಾರಣಕ್ಕೆ ವಿದ್ಯುತ್ ಅಭಾವ ತೀವ್ರವಾಗಿದೆ. ನೆರೆ ರಾಜ್ಯಗಳಿಂದಲೂ ಖರೀದಿಸಲು ವಿದ್ಯುತ್ ಲಭ್ಯವಾಗುತ್ತಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆತಂಕ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂಧನ ಸಚಿವರು ದಿನನಿತ್ಯವೂ ವಿದ್ಯುತ್ ಬೇಡಿಕೆ ಮತ್ತು ಪೂರೈಕೆಯ ಮೇಲೆ ನಿಗಾ ವಹಿಸಿದ್ದಾರೆ. ಅಧಿಕಾರಿಗಳು ಜನರಿಗೆ ಸಹಾಯ ಮಾಡಲು ಲಭ್ಯ ಇರುವ ಎಲ್ಲಾ ಸಾಧ್ಯತೆಗಳನ್ನು ಪರಿಶೀಲಿಸುತ್ತಿದ್ದಾರೆ ಎಂದು ಹೇಳಿದರು.

ಬರ ಪರಿಸ್ಥಿತಿಯ ವೇಳೆಯಲ್ಲಿ ಬೆಳೆ ನಷ್ಟ, ನೀರು ಮತ್ತು ವಿದ್ಯುತ್ತಿನ ಸಮಸ್ಯೆ ತೀವ್ರವಾಗಿದೆ. ದಿನನಿತ್ಯದ ಬೇಡಿಕೆ 20 ಸಾವಿರ ಮೆಗಾ ವ್ಯಾಟ್‌ಗೆ ತಲುಪಿದೆ ಎಂದು ಹೇಳಿದರು. ಬೇರೆ ರಾಜ್ಯಗಳಿಂದ ವಿದ್ಯುತ್ ಖರೀದಿಸಲು ಪ್ರಯತ್ನಿಸುತ್ತಿದ್ದೇವೆ. ಆದರೆ ಎಲ್ಲಿಯೂ ಲಭ್ಯವಿಲ್ಲ.

ಪ್ರತಿ ಯೂನಿಟ್ ವಿದ್ಯುತ್ ಬೆಲೆ ರೂ. 20 ಗಳಿಂದ 23ಗಳವರೆಗೂ ಏರಿಕೆ–ಯಾಗಿದೆ ಎಂದು ವಿವರಿಸಿದರು. ಕಲ್ಲಿದ್ದಲ ಒಂದೆರಡು ದಾಸ್ತಾನು ಒಂದೆರಡು ದಿನಕ್ಕೆ ಮುಗಿಯುತ್ತದೆ. ಅನಂತರ ಉಷ್ಣ ವಿದ್ಯುತ್ ಉತ್ಪಾದನೆ ಕೂಡ ತಗ್ಗಬಹುದು. ನೀರಿನ ಕೊರತೆಯಿಂದ ಜಲ ವಿದ್ಯುತ್ ಸಮಸ್ಯೆ ಇದೆ ಎಂದರು.

ಜೈವಿಕ ಮಾರ್ಗದ ಮೂಲಕ ಇಂಧನ ಉತ್ಪಾದಿಸುವ ಸಕ್ಕರೆ ಕಾರ್ಖಾನೆಗಳ ಮಾಲೀಕರಿಗೆ ನಿರ್ದೇಶನ ನೀಡಲಾಗಿದೆ. ಅಲ್ಲಿ ತಯಾರಾಗುವ ವಿದ್ಯುತ್ತನ್ನು ಬೇರೆ ಕಡೆಗೆ ಮಾರಾಟ ಮಾಡಬಾರದು, ರಾಜ್ಯ ಸರ್ಕಾರಕ್ಕೆ ಪೂರೈಸಬೇಕು ಎಂಬ ಷರತ್ತು ವಿಧಿಸಲಾಗುವುದು. ಕೆಲವು ನಿರ್ಬಂಧಗಳನ್ನು ವಿಧಿಸುವ ಮೂಲಕ ವಿದ್ಯುತ್ ಕೊರತೆಯನ್ನು ಸರಿದೂಗಿಸುವುದು ಅನಿವಾರ್ಯವಾಗಿದೆ ಎಂದು ಹೇಳಿದರು.

ಕರ್ನಾಟಕ ಮಾತ್ರವಲ್ಲದೆ ದೇಶದ



ಬಹುತೇಕ ರಾಜ್ಯಗಳಲ್ಲೂ ಇದೆ ಸಮಸ್ಯೆ ಇದೆ ಎಂದು ವಿವರಿಸಿದರು. ರಾಜ್ಯದಲ್ಲಿ ಆರ್ಥಿಕ ಪರಿಸ್ಥಿತಿ ನಿಭಾಯಿಸುವುದು ಸುಲಭವಲ್ಲ. ಆದರೂ ನಾವು ಅದನ್ನು ನಿರ್ವಹಣೆ ಮಾಡುತ್ತೇವೆ ಎಂದು ಸಮರ್ಥಿಸಿಕೊಂಡರು.

ಆರ್ಥಿಕ ಇಲಾಖೆ ಕಾಲಕಾಲಕ್ಕೆ ಎಚ್ಚರಿ–ಕೆಯ ಪತ್ರ ಬರೆಯುತ್ತದೆ.ಅದರಲ್ಲಿ ಹೊಸದೇನೂ ಇಲ್ಲ. ಈ ಹಿಂದೆ ಬಿ.ಎಸ್. ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿಗಳಾಗಿದ್ದಾಗಲು ಆರ್ಥಿಕ ಇಲಾಖೆ ಪತ್ರ ಬರೆದು ಎಚ್ಚರಿ–ಕೆ ನೀಡಿದೆ. ಅವುಗಳನ್ನು ಬಿಡುಗ–ಡೆ ಮಾಡುತ್ತೇನೆ. ಈಗ ಅದೇ ರೀತಿಯ ಪತ್ರವನ್ನು ಮುಂದಿಟ್ಟುಕೊಂಡು ಬಿಜೆಪಿ ರಾಜಕಾರಣ ನಡೆಸುತ್ತಿದೆ. ದೊಡ್ಡದಾಗಿ ಬಿಂಬಿಸಲಾಗುತ್ತಿದೆ, ನನ್ನ ರಾಜೀನಾಮೆ ಕೇಳುತ್ತಿದ್ದಾರೆ. ಆರ್ಥಿಕ ಶವಯಾತ್ರೆ ಮಾಡುತ್ತಿದ್ದಾರೆ.ಅದಕ್ಕೆ ನಾನು ವಿರೋಧ ವ್ಯಕ್ತಪಡಿಸುವುದಿಲ್ಲ ಎಂದರು.

ಬಿಜೆಪಿಯವರು ಅಧಿಕಾರದಲ್ಲಿದ್ದಾಗ ಎಷ್ಟು ನೀರಾವರಿ ಯೋಜನೆಗಳನ್ನು ಮಂಜೂರು ಮಾಡಿದರು, ಎಷ್ಟು ಹಣ ಬಳಕೆಯಾಗಿತ್ತು ಎಂಬುದನ್ನು ನಾನು ಬಹಿರಂಗಪಡಿಸುತ್ತೇನೆ. ಟೀಕಿಸುವುದು ಸುಲಭ. ಆದರೆ ನಿರ್ವಹಣೆ ಕಷ್ಟ. ನಾವು ನಿರ್ವಹಣೆ ಮಾಡುತ್ತಿದ್ದೇವೆ ಎಂದು ಹೇಳಿದರು.

ಜಾತಿ ಮತ್ತು ಧರ್ಮದ ಆಧಾರದಲ್ಲಿ ಭಾವನಾತಕ ವಿಚಾರವಾಗಿ ನಾನು ರಾಜ–ಕಾರಣ ಮಾಡುವುದಿಲ್ಲ. ಜನರ ಬದುಕಿನ ಮೇಲೆ ರಾಜಕಾರಣ ಮಾಡುತ್ತೇವೆ ಎಂದು ಹೇಳಿದರು. ರಾಜ್ಯದಲ್ಲಿ ಇನ್ನೂರಕ್ಕೂ ಹೆಚ್ಚು ತಾಕ್ಕೂಕುಗಳು ಬರ ಪರಿಸ್ಥಿತಿಯಿಂದ ಬಳಲುತ್ತಿವೆ. ಕರ್ನಾಟಕಕ್ಕೆ ಹೆಚ್ಚಿನ ನೆರವು ನೀಡುವುದು ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಕರ್ತವ್ಯ ಎಂದು ಡಿ.ಕೆ. ಶಿವಕುಮಾರ್ ಒತ್ತಾಯಿಸಿದರು.

ಪ್ರಧಾನಿ ಅವರ ಭೇಟಿಗೆ ಸಮಯ ಕೇಳಲಾಗುವುದು, ಅವಕಾಶ ಸಿಕ್ಕ ತಕ್ಷಣವೇ ರಾಜ್ಯದಿಂದ ಸರ್ವ ಪಕ್ಷ ನಿಯೋಗವನ್ನು ಕರೆದುಕೊಂಡು ಹೋಗುತ್ತೇನೆ. ಬರ ನಿರ್ವಹಣೆಗೆ ಮಧ್ಯಂತರ ಪರಿಹಾರ ನೀಡುವಂತೆ ಒತ್ತಾಯಿಸುತ್ತೇವೆ ಎಂದು ಹೇಳಿದರು.

ವಿಧಾನಸಭೆಯಲ್ಲಿ ಬರ ನಿರ್ವಹಣೆ ಕುರಿತು ಎರಡು ದಿನಗಳ ಚರ್ಚೆಯಾಗಿದೆ. ವ್ಯಾಪಕ ಅಧ್ಯಯನ ಮಾಡಿರುವ ಪರಮೇಶ್ವರ್ ಅವರು ಇಂದು ಚರ್ಚೆಗೆ ಉತ್ತರ ನೀಡುತ್ತಾರೆ ಎಂದು ಹೇಳಿದರು. ವಿರೋಧ ಪಕ್ಷಗಳು ಟೀಕೆ ಮಾಡುವುದಕ್ಕಷ್ಟೇ ಸೀಮಿತವಾಗಿರದೇ, ರಾಜ್ಯದ ನೆರವಿಗೆ ಬರಬೇಕು. ಸರ್ವ ಪಕ್ಷ ನಿಯೋಗದಲ್ಲಿ ಭಾಗವಹಿಸಿ ಕೇಂದ್ರದ ಮೇಲೆ ಒತ್ತಡ ಹೇರಲು ಸಹಕರಿಸಬೇಕು ಎಂದು ಹೇಳಿದರು.

ನಕಲಿ ಔಷಧ ಮಾರಾಟ : ಕೊಲೆ ಪ್ರಕರಣ ದಾಖಲಿಸಲು ಸಿದ್ಧತೆ

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.24– ನಕಲಿ ಔಷಧಿಗಳನ್ನು ಮಾರಾಟ ಮಾಡುವ ಮೂಲಕ ಜನರ ಜೀವದ ಜೊತೆ ಚೆಲ್ಲಾಟವಾಡುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಕೊಲೆ ಮಾಡುವ ಉದ್ದೇಶದ ಆರೋಪದಡಿ ಪ್ರಕರಣ ದಾಖಲಿಸಲು ಸಿದ್ಧತೆ ನಡೆಸಿದೆ.



ನಕಲಿ ಔಷಧಿಗಳಿಗೆ ಕಡಿವಾಣ ಹಾಕಲು ಸರ್ಕಾರ ಕಠಿಣ ಕ್ರಮಕ್ಕೆ ಮುಂದಾಗಿದ್ದು, ಔಷಧಿಗಳು ನಕಲಿ ಎಂದು ಗೊತ್ತಿದ್ದರೂ ಅವುಗಳನ್ನು ಮಾರಾಟ ಮಾಡಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಮುಂದಾಗಿದೆ.

ಮತ್ತೊಂದೆಡೆ, ನಕಲಿ ಔಷಧಿಗಳ ಹಾವಳಿ ಹಾಗೂ ಔಷಧಿಗಳ ದುರುಪಯೋಗವನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೇಂದ್ರ ಔಷಧ ಗುಣಮಟ್ಟ ನಿಯಂತ್ರಣ ಸಂಸ್ಥೆಯು ವೈದ್ಯರು, ಫಾರ್ಮಸಿಸ್ಟ್‌ಗಳು ಹಾಗೂ ಆರೋಗ್ಯ ಸೇವಾ ಸಂಸ್ಥೆಗಳಿಗೆ ಹೊಸ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದೆ.

ವೈದ್ಯರಿಗೆ ಸೂಚನೆ: ರೋಗಿಯ ವಯಸ್ಸು, ಕಾಯಿಲೆ ಹಾಗೂ ಪ್ರಸ್ತುತ ಬಳಸುತ್ತಿರುವ ಔಷಧಿಗಳನ್ನು ಪರಿಗಣಿಸಿ, ಅಗತ್ಯವಿದ್ದಲ್ಲಿ ಮಾತ್ರ ನೋವು ನಿವಾರಕ ಹಾಗೂ ಆ್ಯಂಟಿಬಯಾಟಿಕ್‌ಗಳನ್ನು ಕಡಿಮೆ ಪ್ರಮಾಣದಲ್ಲಿ ಮತ್ತು ಕಡಿಮೆ ಅವಧಿಗೆ ನೀಡುವಂತೆ ವೈದ್ಯರಿಗೆ ಸೂಚಿಸಲಾಗಿದೆ.

ಫಾರ್ಮಸಿಸ್ಟ್‌ಗಳು ಹಾಗೂ ಆರೋಗ್ಯ ಸೇವಾ ಕೇಂದ್ರಗಳು ಔಷಧ ಮಾರಾಟಕ್ಕೆ ಸಂಬಂಧಿಸಿದ ಕಾನೂನುಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ವೈದ್ಯರ ಅನುಮತಿ ಇಲ್ಲದೆ ಮಾತ್ರೆ ಅಥವಾ ಟಾನಿಕ್‌ಗಳನ್ನು ಮಾರಾಟ ಮಾಡಬಾರದು. ಆ್ಯಂಟಿಬಯಾಟಿಕ್ ಹಾಗೂ ನೋವು ನಿವಾರಕಗಳನ್ನು ತೆಗೆದುಕೊಳ್ಳುವಂತೆ ರೋಗಿಗಳನ್ನು ಪ್ರೋತ್ಸಾಹಿಸಬಾರದು ಎಂದು ಮಾರ್ಗಸೂಚಿಯಲ್ಲಿ ತಿಳಿಸಲಾಗಿದೆ.

ನಕಲಿ ಔಷಧ ಜಾಲದಲ್ಲಿ ಯಾರ್ಯಾರು ಸಹಕಾರ ನೀಡಿದ್ದಾರೆ ಎಂಬ ಬಗ್ಗೆಯೂ ಮಾಹಿತಿ ಕಲೆ ಹಾಕಲಾಗುತ್ತಿದೆ. ಈ ಜಾಲದ ಹಣಕಾಸು ವ್ಯವಹಾರ ಹಾಗೂ ಪೂರೈಕೆ ಮಾರ್ಗಗಳ ಕುರಿತು ಎಫ್‌ಡಿಎ ಮತ್ತು ವಾಣಿಜ್ಯ ತೆರಿಗೆ ಇಲಾಖೆ ನಡುವೆ ಸಮನ್ವಯ ಸಾಧಿಸಿ ಪೊಲೀಸರು ತನಿಖೆ ನಡೆಸಲು ಸಿದ್ಧತೆ ನಡೆಸಿದ್ದಾರೆ.

ನಂದಿನಿ ಹಾಲಿನ ದರ ಪ್ರತಿ ಲೀಟರ್‌ಗೆ 2 ರೂ. ಏರಿಕೆ ಸಾಧ್ಯತೆ

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.24– ಕೆಎಂಎಫ್ ನಂದಿನಿ ಹಾಲು ಹಾಗೂ ಇತರ ಉತ್ಪನ್ನಗಳ ದರವನ್ನು ಸರಿಸುಮಾರು 2ರಷ್ಟು ಹೆಚ್ಚಿಸಲು ರಾಜ್ಯ ಸರ್ಕಾರ ಅನುಮತಿಸುವ ಸಾಧ್ಯತೆ ಇದೆ. ವಿಧಾನಸಭೆ ಹಾಗೂ ವಿಧಾನಪರಿಷತ್ತಿನಲ್ಲಿ ಬರ ಪರಿಸ್ಥಿತಿ ಕುರಿತು ನಡೆದ ಚರ್ಚೆಯಲ್ಲಿ ಭಾಗವಹಿಸಿದ್ದ ಬಹುತೇಕ ಶಾಸಕರು ನಂದಿನಿ ಹಾಲಿನ ದರ ಹೆಚ್ಚಿಸಲು ಒತ್ತಡ ಹೇರಿದ್ದಾರೆ. ಆಡಳಿತ ಪಕ್ಷಗಳ ಸದಸ್ಯರಷ್ಟೇ ಅಲ್ಲದೆ, ವಿರೋಧ ಪಕ್ಷಗಳ ಸದಸ್ಯರಿಂದಲೂ ಇದೇ ಒತ್ತಾಯ ಕೇಳಿಬಂದಿದೆ.

ಹಾಲು ಮಹಾಮಂಡಳ ಹಾಗೂ ಅದರ ಒಕ್ಕೂಟಗಳು ಪ್ರತಿ ಲೀಟರ್‌ಗೆ ಸುಮಾರು 10 ದರ ಏರಿಕೆ ಮಾಡಬೇಕೆಂದು ಪಟ್ಟು ಹಿಡಿದಿವೆ. ನಾಳೆ ಕೆಎಂಎಫ್ನ ಆಡಳಿತ ಮಂಡಳಿ ಸಭೆ ನಡೆಯಲಿದ್ದು, ದರ ಏರಿಕೆಗೆ ಅನುಮತಿ ನೀಡುವಂತೆ ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಸಿದ್ಧತೆ ನಡೆಸಿವೆ. ಮುಂದಿನ ವಾರ ಕೆಎಂಎಫ್ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯಲಿದ್ದು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಹೋದರ ಡಿ.ಕೆ. ಸುರೇಶ್ ಅಧ್ಯಕ್ಷರಾಗುವ ಸಾಧ್ಯತೆ ಇದೆ.

ಪ್ರಸ್ತುತ ಮಾರುಕಟ್ಟೆಯಲ್ಲಿ ಪಶು ಮೇವು ಹಾಗೂ ಇತರ ಹೈನುಗಾರಿಕೆ ವೆಚ್ಚಗಳು ದುಬಾರಿಯಾಗಿದ್ದು, ಹಾಲು ಉತ್ಪಾದಕರು ನಷ್ಟ ಅನುಭವಿಸುತ್ತಿದ್ದಾರೆ ಎಂಬ ಚರ್ಚೆ ನಡೆಯುತ್ತಿದೆ. ಈ ನಷ್ಟವನ್ನು ಸರಿದೂಗಿಸಲು ಹಾಲಿನ ದರ ಏರಿ–ಕೆಗೆ ಅನುಮತಿ ನೀಡಲೇಬೇಕು ಎಂಬ ಒತ್ತಡವಿದೆ. ಪಶು ಆಹಾರದ ಬೆಲೆ ಪ್ರತಿ ಚೀಲಕ್ಕೆ 720ರಿಂದ 1,250ರವರೆಗೆ ಏರಿ–ಕೆಯಾಗಿದೆ.

ಹಾಲು ಒಕ್ಕೂಟಗಳೂ ನಷ್ಟದಲ್ಲಿದ್ದು, ಹಾಲಿನ ದರ ಏರಿಕೆಗೆ ಅನುಮತಿ ನೀಡದಿದ್ದರೆ ಸರ್ಕಾರವೇ ನಷ್ಟದ ಹಣವನ್ನು ಭರಿಸಿಕೊಡಬೇಕು ಎಂಬ ಬೇಡಿಕೆ ಕೇಳಿಬರುತ್ತಿದೆ. ರಾಜ್ಯ ಸರ್ಕಾರ ಆರ್ಥಿಕ ಸಂಕಷ್ಟದಲ್ಲಿದ್ದು, ಹಾಲಿನ ಪ್ರೋತ್ಸಾಹಧನ ಬಿಡುಗಡೆ ಮಾಡಲು ಪರದಾಡುತ್ತಿದೆ. ಹೀಗಿರುವಾಗ ನಷ್ಟದ ಮೊತ್ತವನ್ನು ಭರಿಸಿಕೊಡಬೇಕು ಎಂದು ಕೇಳಿದರೆ, ಸದ್ಯದ ಪರಿಸ್ಥಿತಿಯಲ್ಲಿ ಅದು ಅಸಾಧ್ಯದ ಮಾತು ಎಂದು ಹೇಳಲಾಗುತ್ತಿದೆ.

ಹಾಲು ಒಕ್ಕೂಟಗಳಿಗೆ ಪ್ರತಿದಿನ 1.11 ಕೋಟಿ ಲೀಟರ್ ಹಾಲು ಸಂಗ್ರಹವಾಗುತ್ತಿದೆ. ಪ್ರಸ್ತುತ ಪ್ರತಿ ಲೀಟರ್ ಹಾಲನ್ನು 35 ದರದಲ್ಲಿ ಉತ್ಪಾದಕರಿಂದ ಖರೀದಿಸಲಾಗುತ್ತಿದೆ. ರಾಷ್ಟ್ರಮಟ್ಟದಲ್ಲಿ ಸರಾಸರಿ ಪ್ರತಿ ಲೀಟರ್ ಹಾಲನ್ನು 41ರ



ದರದಲ್ಲಿ ಖರೀದಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ 8ರಿಂದ 10ರಷ್ಟು ದರ ಏರಿಕೆ ಮಾಡಿದರೆ ರೈತರು ಹಾಗೂ ಹಾಲು ಉತ್ಪಾದಕರು ಅನುಭವಿಸುತ್ತಿರುವ ನಷ್ಟವನ್ನು ಸರಿಪಡಿಸಬಹುದು ಎಂಬ ಚರ್ಚೆಗಳು ನಡೆಯುತ್ತಿವೆ.

ಇದೇ ವೇಳೆ ಪ್ರತಿ ಲೀಟರ್ ಹಾಲಿಗೆ ಸರ್ಕಾರ ನೀಡುತ್ತಿರುವ ಪ್ರೋತ್ಸಾಹಧನವನ್ನು 5ರಿಂದ 8ಕ್ಕೆ ಹೆಚ್ಚಿಸಬೇಕು ಎಂಬ ಒತ್ತಾಯವೂ ಇದೆ. ಹಾಲು ಒಕ್ಕೂಟಗಳ ಪ್ರಮುಖರು ಎರಡು ದಿನಗಳ ಹಿಂದೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ಹಾಲಿನ ದರ ಹೆಚ್ಚಳಕ್ಕೆ ಅನುಮತಿ ನೀಡುವಂತೆ ಮನವಿ ಮಾಡಿದ್ದಾರೆ.

ಹಾಲಿನ ದರ ಹೆಚ್ಚಳದಿಂದ ರೈತರಿಗೆ ಅನುಕೂಲವಾಗಲಿದೆ. ಗ್ರಾಮೀಣ ಭಾಗದ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇದು ಕಾಂಗ್ರೆಸ್ ಪಕ್ಷ–ಕ್ಕೆ ಅನುಕೂಲವಾಗಬಹುದು ಎಂಬ ಲೆಕ್ಕಾಚಾರವೂ ನಡೆದಿದೆ ಎನ್ನಲಾಗಿದೆ. ಆದರೆ ಹಾಲು ಖರೀದಿಸುವ ಗ್ರಾಹಕರಿಗೆ ಹೊರೆಯಾಗುವುದನ್ನು ಪರಿಗಣಿಸಿ 10ರ ಬದಲಿಗೆ 2ರಷ್ಟು ದರ ಹೆಚ್ಚಿಸಲು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ ಎಂದು ಮೂಲಗಳು ತಿಳಿಸಿವೆ.

ಬಾಂಗ್ಲಾ ಯುವತಿಯನ್ನು ಮದುವೆಯಾಗಿದ್ದ 'ಹೈಟೆಕ್ ಕಳ್ಳ'

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.24– ಬಿ.ಟೆಕ್ ವ್ಯಾಸಂಗ ಮಾಡುತ್ತಿದ್ದಾಗಲೇ ಕಳ್ಳತನದ ಹಾದಿ ಹಿಡಿದಿದ್ದ ಹೈಟೆಕ್ ಖದೀಮನೊಬ್ಬ ಪ್ರಯಾಣ ಮಾಡುತ್ತಿದ್ದದ್ದು ವಿಮಾನದಲ್ಲೇ. ನಗರಕ್ಕೆ ವಿಮಾನದಲ್ಲಿ ಬಂದು ಮನೆಗಳ್ಳತನ ಮಾಡಿ ಮತ್ತೆ ವಿಮಾನದಲ್ಲೇ ಪರಾರಿಯಾಗುತ್ತಿದ್ದ ಈತನ ಬಂಧನ ವಿಲ್ಸನ್ ಗಾರ್ಡನ್ ಠಾಣೆ ಪೊಲೀಸರಿಗೆ ಸವಾಲಾಗಿ ಪರಿಣಮಿಸಿತ್ತು.



ಬಿ.ಟೆಕ್ ವ್ಯಾಸಂಗವನ್ನು ಅರ್ಧ–ಕ್ಕೆ ಮೊಟಕುಗೊಳಿಸಿರುವ ತೆಲಂಗಾಣದ ನಲ್ಗೊರು ನಿವಾಸಿ ವಿನೋದ್ ಕುಮಾರ್ (32) ಹೈದರಾಬಾದ್‌ನಲ್ಲಿ ಕೆಲಸ ಮಾಡುತ್ತಿದ್ದ ಬಾಂಗ್ಲಾದೇಶದ ಯುವತಿಯೊಬ್ಬಳ ಪರಿಚಯವಾಗಿ, ಬಳಿಕ ಆಕೆಯನ್ನು ಪ್ರೀತಿಸಿ ವಿವಾಹವಾಗಿದ್ದಾನೆ.

ನಂತರ ಆಕೆ ಬಾಂಗ್ಲಾದೇಶಕ್ಕೆ ತೆರಳಿ ಅಲ್ಲಿಯೇ ನೆಲೆಸಿದ್ದಳು. ವಿನೋದ್ ಕುಮಾರ್ ಹಲವು ಬಾರಿ ಅಲ್ಲಿಗೆ ಹೋಗಿ ಬರುತ್ತಿದ್ದನು. ದಂಪತಿಗೆ ಇಬ್ಬರು ಮಕ್ಕಳಿದ್ದಾರೆ. ಹೈದರಾಬಾದ್‌ನಿಂದ ಬೆಂಗಳೂರಿಗೆ ವಿಮಾನದಲ್ಲಿ ಬರುತ್ತಿದ್ದ ಈ ಹೈಟೆಕ್ ಕಳ್ಳ ಮನೆಗಳ್ಳತನ ಮಾಡಿ ಮತ್ತೆ ವಿಮಾನದಲ್ಲೇ ಹೈದರಾಬಾದ್‌ಗೆ ಪರಾರಿಯಾಗುತ್ತಿದ್ದನು. ಈತನ ಪತ್ನಿ ದೆಹಲಿಗೆ ಬಂದಿರುವ ವಿಷಯ ತಿಳಿದು, ಆಕೆಗೆ ಹಣ ನೀಡುವ ಸಲುವಾಗಿ ಹೈದರಾಬಾದ್‌ನಿಂದ ದೆಹಲಿಗೆ ತೆರಳಿದ್ದನು. ಅಲ್ಲಿಂದ ವಾಪಸ್ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಾಗ ಪೊಲೀಸರು ಆತನನ್ನು ಬಂಧಿಸಿದ್ದಾರೆ.

20 ದಿನಗಳ ಹಿಂದಷ್ಟೇ ವಾರಾಣಸಿ ಜೈಲಿನಿಂದ ಈತ ಬಿಡುಗಡೆಯಾಗಿದ್ದ ಎಂಬುದು ಪೊಲೀಸರ ವಿಚಾರಣೆಯಿಂದ ಬಯಲಾಗಿದೆ.ಈತನ ವಿರುದ್ಧ ತೆಲಂಗಾಣದಲ್ಲಿ 28, ಉತ್ತರ ಪ್ರದೇಶದಲ್ಲಿ ಒಂದು ಹಾಗೂ ಬೆಂಗಳೂರು ನಗರದಲ್ಲಿ ಒಂದು ಪ್ರಕರಣ ಸೇರಿದಂತೆ ಒಟ್ಟು 30 ಪ್ರಕರಣಗಳು ದಾಖಲಾಗಿವೆ. ತೆಲಂಗಾಣ ಪೊಲೀಸರಿಗೆ ಬೇಕಾಗಿದ್ದ ಈತ ಇದೀಗ ಬೆಂಗಳೂರು ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದು, ಆತನ ಹೈಟೆಕ್ ಕಳ್ಳತನದ ವಿವರಗಳು ಬಹಿರಂಗವಾಗಿವೆ.

ಲಾಲ್‌ಬಾಗ್ ಪಶ್ಚಿಮ ದ್ವಾರದ ಬಳಿ ಇರುವ ನಂದಿನಿ ಮಳಿಗೆ ತೆರವಿಗೆ ಆಗ್ರಹ

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.24– ನಗರದ ಐತಿಹಾಸಿಕ ಹಾಗೂ ಪಾರಂಪರಿಕ ತಾಣ ಲಾಲ್‌ಬಾಗ್ ಪಶ್ಚಿಮ ದ್ವಾರದ ಮುಂಭಾಗ ಸ್ಥಾಪಿಸಲಾಗಿರುವ ನಂದಿನಿ ಹಾಲು ಉತ್ಪನ್ನಗಳ ಮಾರಾಟ ಮಳಿಗೆಯನ್ನು ಕೂಡಲೇ ತೆರವುಗೊಳಿಸಬೇಕು ಎಂದು ಬಿಬಿಎಂಪಿ ಆಡಳಿತ ಪಕ್ಷದ ಮಾಜಿ ನಾಯಕ ಎನ್.ಆರ್. ರಮೇಶ್ ಆಗ್ರಹಿಸಿದ್ದಾರೆ.

ಈ ಸಂಬಂಧ ಸರ್ಕಾರದ ಮುಖ್ಯ ಕಾರ್ಯದರ್ಶಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಮುಖ್ಯ ಆಯುಕ್ತರು ಹಾಗೂ ಬೆಂಗಳೂರು ಕೇಂದ್ರ ನಗರ ಪಾಲಿಕೆ ಆಯುಕ್ತರಿಗೆ ಸಂಪೂರ್ಣ ದಾಖಲೆಗಳೊಂದಿಗೆ ಮನವಿ ಸಲ್ಲಿಸಿರುವುದಾಗಿ ಅವರು ಸುದ್ದಿಗಾರರಿಗೆ ತಿಳಿಸಿದ್ದಾರೆ.

ಪ್ರಸ್ತಾವ ತಿರಸ್ಕರಿಸಿದ್ದರೂ ಅನುಮತಿ?

ಸುಮಾರು 240 ಎಕರೆ ಪ್ರದೇಶದಲ್ಲಿರುವ ಲಾಲ್‌ಬಾಗ್ ಹಲವು ಶತಮಾನಗಳ ಇತಿಹಾಸ ಹೊಂದಿದ್ದು, ಅದರ ಸಂರಕ್ಷಣೆಗೆ ಸಂಬಂಧಿಸಿದ ಕಾನೂನು ಮತ್ತು ನಿಯಮಗಳನ್ನು ಪಾಲಿಸಬೇಕಿದೆ. ಇಂತಹ ಪಾರಂಪರಿಕ ತಾಣದ ಪಶ್ಚಿಮ ದ್ವಾರದ ಮುಂಭಾಗ ನಂದಿನಿ ಹಾಲು ಉತ್ಪನ್ನಗಳ ಮಾರಾಟ ಮಳಿಗೆ ಸ್ಥಾಪಿಸುವ ಸಂಬಂಧ ಬಿಬಿಎಂಪಿಯಿಂದ ಬಂದಿದ್ದ ಪ್ರಸ್ತಾವನೆಯನ್ನು ತೋಟಗಾರಿಕೆ



ಇಲಾಖೆಯ ಉಪ ನಿರ್ದೇಶಕರು 2025ರ ಆಗಸ್ಟ್ 22ರಂದು ತಿರಸ್ಕರಿಸಿದ್ದರು ಎಂದು ರಮೇಶ್ ತಿಳಿಸಿದ್ದಾರೆ.

ಆದರೆ, ಬಳಿಕ ಬೆಂಗಳೂರು ಕೇಂದ್ರ ನಗರ ಪಾಲಿಕೆಯು 2026ರ ಏಪ್ರಿಲ್ 22ರಂದು ಇದೇ ಸ್ಥಳದಲ್ಲಿ ನಂದಿನಿ ಮಳಿಗೆ ಸ್ಥಾಪಿಸಲು ಅನುಮೋದನೆ ನೀಡಿ–ದ್ದು, ವಿಷಯ ಸಂಖ್ಯೆ 01/2026–27ರ ಅಡಿ ನಿರ್ಣಯ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದ್ದಾರೆ.

100 ಚದರ ಅಡಿ ಜಾಗ ಹಸ್ತಾಂತರ

ಇದಾದ ಬಳಿಕ ಕೇಂದ್ರ ನಗರ ಪಾಲಿಕೆಯ ಜಂಟಿ ಆಯುಕ್ತರು–2 ಅವರು ಜೂನ್ 10ರಂದು ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳಿಯ ವ್ಯವಸ್ಥಾಪಕ ನಿರ್ದೇಶಕರೊಂದಿಗೆ ಕರಾರು ಮಾಡಿಕ

ಕಾಯಕದ ನಡುವೆ ಕಾದಂಬರಿ ಕೃಷಿ: 'ಬಿಡಿ ಹೂವು' ಅರಳಿಸಿದ ಸಿದ್ದಾರ್ಥ್

ಪ್ರತಿಯೊಬ್ಬರಲ್ಲೂ ಪ್ರತಿಭೆಯಿದೆ; ಅದನ್ನು ಗುರುತಿಸಿ ಹೊರತರುವ ಕೆಲಸವಾಗಬೇಕು: ಇಓ ಕೆಂಚಪ್ಪ





"ಮುಂಜಾನೆಯ ಮೆರಗು"

ಜಗಳೂರು, ಸೆ.24– ಪ್ರತಿಯೊಬ್ಬ ವ್ಯಕ್ತಿಯಲ್ಲಿಯೂ ಒಂದೊಂದು ವಿಶಿಷ್ಟವಾದ ಪ್ರತಿಭೆ ಹಾಗೂ ಸೃಜನಶೀಲ ಶಕ್ತಿ ಅಡಗಿರುತ್ತದೆ. ಆದರೆ ದಿನನಿತ್ಯದ ಬದುಕಿನ ಜಂಜಾಟ, ವೃತ್ತಿಯ ಒತ್ತಡ ಹಾಗೂ ಸಮಯದ ಕೊರತೆಯಿಂದಾಗಿ ಬಹುತೇಕರು ತಮ್ಮಲ್ಲಿರುವ ಪ್ರತಿಭೆಯನ್ನು ಹೊರತರಲು ಸಾಧ್ಯವಾಗುವುದಿಲ್ಲ. ಹೀಗಾಗಿ ಪ್ರತಿಯೊಬ್ಬರೂ ತಮ್ಮಲ್ಲಿರುವ ಆಸಕ್ತಿ ಮತ್ತು ಪ್ರತಿಭೆಯನ್ನು ಗುರುತಿಸಿಕೊಂಡು ಅದನ್ನು ಬೆಳೆಸಿಕೊಳ್ಳುವ ಪ್ರಯತ್ನ ಮಾಡಬೇಕು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ಹೇಳಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ನಡೆದ ಸಮಾರಂಭದಲ್ಲಿ ಸಿದ್ದಾರ್ಥ್ ಜೆ.ಎಂ. ಅವರ 'ಬಿಡಿ ಹೂವು' ಕಾದಂಬರಿಯನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಕಾಯಕದ ಜತೆಗೆ ಸಾಹಿತ್ಯದ ನಂಟು

ಸರ್ಕಾರಿ ಸೇವೆ ಅಥವಾ ಯಾವುದೇ ವೃತ್ತಿಯಲ್ಲಿ ತೊಡಗಿಸಿಕೊಂಡವರು ತಮ್ಮ ಕೆಲಸದ ಜವಾಬ್ದಾರಿಗಳ ನಡುವೆಯೂ ಸಾಹಿತ್ಯ, ಕಲೆ, ಕ್ರೀಡೆ ಸೇರಿದಂತೆ ಸೃಜನಶೀಲ ಕ್ಷೇತ್ರಗಳಿಗೆ ಸಮಯ ನೀಡುವುದು ಸುಲಭದ ಕೆಲಸವಲ್ಲ. ಅಂತಹ ಸಂದರ್ಭದಲ್ಲಿ ತಮ್ಮ ವೃತ್ತಿಯ ಜತೆಗೆ ಕಾದಂಬರಿ ರಚಿಸಿ ಅದನ್ನು ಓದುಗರ ಮುಂದೆ ತಂದಿರುವ ಸಿದ್ದಾರ್ಥ್ ಅವರ ಪ್ರಯತ್ನ ಶ್ಲಾಘನೀಯವಾಗಿದೆ ಎಂದು ಕೆಂಚಪ್ಪ ಮೆಚ್ಚುಗೆ ವ್ಯಕ್ತಪಡಿಸಿದರು.

ಸಿದ್ದಾರ್ಥ್ ಅವರು ವೃತ್ತಿಯಲ್ಲಿ ಲ್ಯಾಬ್ ಟೆಕ್ನಿಷಿಯನ್ ಆಗಿ ಕಾರ್ಯನಿರ್ವಹಿಸುತ್ತಿದ್ದು, ತಮ್ಮ ಕರ್ತವ್ಯದ ಜತೆಗೆ ಸಾಹಿತ್ಯದತ್ತಲೂ ಒಲವು ಬೆಳೆಸಿಕೊಂಡಿದ್ದಾರೆ. ಸಮಯ ಸಿಕ್ಕಾಗಲೆಲ್ಲ ಬರವಣಿಗೆಯಲ್ಲಿ ತೊಡಗಿಸಿಕೊಂಡು ತಮ್ಮ ಚಿಂತನೆ, ಅನುಭವ, ಕಲ್ಪನೆ ಹಾಗೂ ಭಾವನೆಗಳಿಗೆ ಅಕ್ಷರ ರೂಪ ನೀಡಿರುವುದು ಯುವಜನತೆಗೆ ಪ್ರೇರಣಾದಾಯಕವಾಗಿದೆ ಎಂದರು.

ಪ್ರತಿಭೆ ಹೊರಬರಲು ವೇದಿಕೆ ಅಗತ್ಯ

ಸಮಾಜದಲ್ಲಿ ಅನೇಕ ಪ್ರತಿಭಾವಂತರು ತಮ್ಮಲ್ಲಿರುವ ಸಾಮರ್ಥ್ಯವನ್ನು ಗುರುತಿಸಿಕೊಳ್ಳದೆ ಸಾಮಾನ್ಯ ಬದುಕಿನಲ್ಲಿ ಕಳೆದುಹೋಗುತ್ತಿದ್ದಾರೆ. ಪ್ರತಿಯೊಬ್ಬರಲ್ಲೂ ಯಾವುದಾದರೂ ಒಂದು ಕ್ಷೇತ್ರದಲ್ಲಿ ಆಸಕ್ತಿ ಮತ್ತು ಸಾಮರ್ಥ್ಯ ಇರುತ್ತದೆ. ಕುಟುಂಬ, ಸ್ನೇಹಿತರು, ಸಹೋದ್ಯೋಗಿಗಳು ಹಾಗೂ ಸಮಾಜ ಅಂತಹ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡಿದಾಗ ಮಾತ್ರ ಅವುಗಳು ಬೆಳಕಿಗೆ ಬರಲು ಸಾಧ್ಯ.

ಒಬ್ಬ ವ್ಯಕ್ತಿಯ ಸಾಧನೆಯನ್ನು ಕೇವಲ ಅವರ ವೃತ್ತಿಯ ಆಧಾರದ ಮೇಲೆ ಅಳೆಯಬಾರದು. ವೃತ್ತಿಯ ಹೊರತಾಗಿಯೂ ಅವರು ಬೆಳೆಸಿಕೊಂಡಿರುವ ಆಸಕ್ತಿ, ಜ್ಞಾನ ಮತ್ತು ಸೃಜನಶೀಲತೆಯೂ ಅವರ ವ್ಯಕ್ತಿತ್ವದ ಭಾಗವಾಗಿದೆ. ಈ ನಿಟ್ಟಿನಲ್ಲಿ ಸಿದ್ದಾರ್ಥ್ ಅವರು ಕಾಯಕದ ಜತೆಗೆ ಸಾಹಿತ್ಯ ಕ್ಷೇತ್ರದಲ್ಲಿ ಹೆಜ್ಜೆ ಇಟ್ಟಿರುವುದು ಗಮನಾರ್ಹ ಸಂಗತಿ ಎಂದು ಹೇಳಿದರು.

'ಬಿಡಿ ಹೂವು' ಸಾಹಿತ್ಯ ಪಯಣದ ಮೊದಲ ಹೆಜ್ಜೆ

'ಬಿಡಿ ಹೂವು' ಕಾದಂಬರಿ ಸಿದ್ದಾರ್ಥ್ ಅವರ ಸಾಹಿತ್ಯ ಪಯಣದ ಮಹತ್ವದ ಹೆಜ್ಜೆಯಾಗಿದ್ದು, ಮುಂದಿನ ದಿನಗಳಲ್ಲಿ ಅವರು ಇನ್ನಷ್ಟು ಕೃತಿಗಳನ್ನು ರಚಿಸುವಂತಾಗಬೇಕು. ಪುಸ್ತಕ ಬರೆಯುವುದು ಮಾತ್ರವಲ್ಲದೆ, ಅದನ್ನು ಓದುಗರಿಗೆ ತಲುಪಿಸುವುದು ಕೂಡ ದೊಡ್ಡ ಜವಾಬ್ದಾರಿಯಾಗಿದೆ. ಕೃತಿಯ ಮೂಲಕ ಸಮಾಜದ ಬದುಕಿನ ವಿವಿಧ ಆಯಾಮಗಳನ್ನು ಪರಿಚಯಿಸುವ ಕೆಲಸವಾಗಬೇಕು ಎಂದು ಕೆಂಚಪ್ಪ ಆಶಿಸಿದರು.

ಸಾಹಿತ್ಯವು ಮನುಷ್ಯನ ಮನಸ್ಸನ್ನು ಸೂಕ್ಷ್ಮಗೊಳಿಸುವ ಶಕ್ತಿಯನ್ನು ಹೊಂದಿದೆ. ಓದುವ ಹವ್ಯಾಸ ವ್ಯಕ್ತಿಯ ಜ್ಞಾನವನ್ನು ವಿಸ್ತರಿಸುವುದರ ಜತೆಗೆ ಆಲೋಚನಾ ಶಕ್ತಿಯನ್ನೂ ಬೆಳೆಸುತ್ತದೆ. ಆದ್ದರಿಂದ ಯುವಜನರು ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳ ಬಳಕೆಯ ನಡುವೆಯೂ ಪುಸ್ತಕ ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕುಟುಂಬದ ಪ್ರೋತ್ಸಾಹವೂ ಮಹತ್ವದ್ದು

ಸಿದ್ದಾರ್ಥ್ ಅವರ ಸಾಹಿತ್ಯಾಸಕ್ತಿಗೆ ಕುಟುಂಬದ ಬೆಂಬಲವೂ ಪ್ರಮುಖವಾಗಿದೆ. ತಮಲೆ ಹಳ್ಳಿಗ್ರಾಮದ ಜಯಪ್ಪ ಅವರ ಪುತ್ರರಾದ ಸಿದ್ದಾರ್ಥ್, ತಮ್ಮ ವೃತ್ತಿ ಜೀವನದ ಜತೆಗೆ ಬರವಣಿಗೆಯನ್ನು ಮುಂದುವರಿಸಿಕೊಂಡು ಬಂದಿದ್ದಾರೆ. ಒಂದು ಕೃತಿಯ ಹಿಂದೆ ಲೇಖಕರ ಪರಿಶ್ರಮದ ಜತೆಗೆ ಕುಟುಂಬದ ಪ್ರೋತ್ಸಾಹ, ಸ್ನೇಹಿತರ ಉತ್ತೇಜನ ಹಾಗೂ ಸಹೋದ್ಯೋಗಿಗಳ ಸಹಕಾರವೂ ಅಡಗಿರುತ್ತದೆ.

'ಬಿಡಿ ಹೂವು' ಕಾದಂಬರಿ ಲೋಕಾರ್ಪಣೆಯಾಗಿರುವುದು ಸಿದ್ದಾರ್ಥ್ ಅವರ ವೈಯಕ್ತಿಕ ಸಾಧನೆಯಷ್ಟೇ ಅಲ್ಲದೆ, ಜಗಳೂರು ತಾಲೂಕಿನ ಸ್ಥಳೀಯ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸುವ ನಿಟ್ಟಿನಲ್ಲಿಯೂ ಮಹತ್ವದ್ದಾಗಿದೆ ಎಂದು ಕಾರ್ಯಕ್ರಮದಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಸಾಹಿತ್ಯದ ಮೂಲಕ ಹೊಸ ಚಿಂತನೆ

ಸಮಾಜದಲ್ಲಿ ನಡೆಯುವ ಘಟನೆಗಳು, ಮಾನವ ಸಂಬಂಧಗಳು, ಬದುಕಿನ ಏರಿಳಿತಗಳು ಹಾಗೂ ವ್ಯಕ್ತಿಯ ಮನೋಭಾವಗಳು ಸಾಹಿತ್ಯಕ್ಕೆ ನಿರಂತರವಾಗಿ ವಿಷಯ ಒದಗಿಸುತ್ತವೆ. ಇಂತಹ ಅನುಭವಗಳನ್ನು ಬರವಣಿಗೆಯ ಮೂಲಕ ದಾಖಲಿಸುವುದರಿಂದ ಮುಂದಿನ ಪೀಳಿಗೆಗೂ ಅವು ಪರಿಚಯವಾಗುತ್ತವೆ. ಸ್ಥಳೀಯವಾಗಿ ಬೆಳೆಯುತ್ತಿರುವ ಇಂತಹ ಬರಹಗಾರರನ್ನು ಪ್ರೋತ್ಸಾಹಿಸುವ ಅಗತ್ಯವಿದೆ ಎಂದು ಗಣ್ಯರು ತಿಳಿಸಿದರು.

ವೃತ್ತಿಯ ಜತೆಗೆ ಸಾಹಿತ್ಯ ಕೃಷಿ ಮಾಡುತ್ತಿರುವ ಸಿದ್ದಾರ್ಥ್ ಅವರಿಗೆ ಶುಭಾಶಯ ಸಲ್ಲಿಸಿದ ಗಣ್ಯರು, 'ಬಿಡಿ ಹೂವು' ಕಾದಂಬರಿ ಓದುಗರ ಮೆಚ್ಚುಗೆಗೆ ಪಾತ್ರವಾಗಲಿ ಹಾಗೂ ಮುಂದಿನ ದಿನಗಳಲ್ಲಿ ಇನ್ನಷ್ಟು ಉತ್ತಮ ಕೃತಿಗಳು ಅವರಿಂದ ಹೊರಬರಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಎಓ ಮಂಜುನಾಥ್, ಪಿಡಿಓ ಅರವಿಂದ್ ಸೇರಿದಂತೆ ತಾಲೂಕು ಪಂಚಾಯಿತಿ ಸಿಬ್ಬಂದಿ, ಸಹೋದ್ಯೋಗಿಗಳು ಹಾಗೂ ಸಾಹಿತ್ಯಾಸಕ್ತರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಕಾದಂಬರಿ ಲೋಕಾರ್ಪಣೆಯ ಸಂದರ್ಭದಲ್ಲಿ ಸಿದ್ದಾರ್ಥ್ ಅವರ ಸಾಹಿತ್ಯ ಪ್ರಯತ್ನಕ್ಕೆ ಅಭಿನಂದನೆ ಸಲ್ಲಿಸಲಾಯಿತು.

ಚರಂಡಿ ಕಾಮಗಾರಿಗೆ ಸಾರ್ವಜನಿಕರ ಸಹಕಾರ ಅಗತ್ಯ: ಸಿ.ಲೋಕ್ಯಾನಾಯ್ಕ



"ಮುಂಜಾನೆಯ ಮೆರಗು"

ಜಗಳೂರು, ಸೆ.24– ಪಟ್ಟಣದ ಅಭಿವೃದ್ಧಿ ಕಾಮಗಾರಿಗಳು ಸಮರ್ಪಕವಾಗಿ ಹಾಗೂ ಯಾವುದೇ ಅಡಚಣೆಯಿಲ್ಲದೆ ಪೂರ್ಣಗೊಳ್ಳಲು ಸಾರ್ವಜನಿಕರ ಸಹಕಾರ ಅತ್ಯಂತ ಅಗತ್ಯವಾಗಿದೆ ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿ.ಲೋಕ್ಯಾನಾಯ್ಕ ಹೇಳಿದರು.

ಪಟ್ಟಣದ ಅಂಬೇಡ್ಕರ್ ವೃತ್ತದ ಸಮೀಪ ರಸ್ತೆಯ ಪಕ್ಕದಲ್ಲಿ ನಿರ್ಮಿಸಲಾಗುತ್ತಿರುವ ಚರಂಡಿ ಕಾಮಗಾರಿಯನ್ನು ಗುರುವಾರ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ಪಟ್ಟಣದಲ್ಲಿ ಮಳೆ ನೀರು ಹಾಗೂ ಕೊಳಚೆ ನೀರು ರಸ್ತೆಗೆ ಹರಿದು ಸಾರ್ವಜನಿಕರಿಗೆ ತೊಂದರೆಯಾಗದಂತೆ ಚರಂಡಿ ವ್ಯವಸ್ಥೆ ಕಲ್ಪಿಸಲಾಗುತ್ತಿದೆ. ಕಾಮಗಾರಿಗಾಗಿ ಸರ್ಕಾರಿ ಜಾಗವನ್ನು ಮಾತ್ರ ಬಳಸಿಕೊಳ್ಳಲಾಗುತ್ತಿದ್ದು, ಯಾವುದೇ ಖಾಸಗಿ ಜಾಗವನ್ನು ಒತ್ತುವರಿ ಮಾಡಿಕೊಂಡು ಚರಂಡಿ ನಿರ್ಮಿಸಲಾಗುತ್ತಿಲ್ಲ ಎಂದು ಸ್ಪಷ್ಟಪಡಿಸಿದರು.

ಪಟ್ಟಣದ ಸ್ವಚ್ಛತೆ, ರಸ್ತೆ ಮತ್ತು ಚರಂಡಿ ಸೇರಿದಂತೆ ಮೂಲಸೌಕರ್ಯ ಕಾಮಗಾರಿಗಳು ಸಾರ್ವಜನಿಕರ ಹಿತದೃಷ್ಟಿಯಿಂದ ಕೈಗೊಳ್ಳಲಾಗುತ್ತಿವೆ. ಇಂತಹ ಅಭಿವೃದ್ಧಿ ಕಾರ್ಯಗಳಿಗೆ ಸಾರ್ವಜನಿಕರು ಅಗತ್ಯ ಸಹಕಾರ ನೀಡಬೇಕು. ಕಾಮಗಾರಿ ನಡೆಯುವ ಸಂದರ್ಭದಲ್ಲಿ ಸಾರ್ವಜನಿಕರು ಅನಗತ್ಯವಾಗಿ ಅಡ್ಡಿಪಡಿಸದೆ, ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಹಕರಿಸಿದರೆ ಕಾಮಗಾರಿಗಳನ್ನು ನಿಗದಿತ ರೀತಿಯಲ್ಲಿ ಪೂರ್ಣಗೊಳಿಸಲು ಅನುಕೂಲವಾಗಲಿದೆ ಎಂದು ಹೇಳಿದರು.

ಚರಂಡಿ ವ್ಯವಸ್ಥೆ ಪೂರ್ಣಗೊಂಡ ಬಳಿಕ ಮಳೆಗಾಲದಲ್ಲಿ ರಸ್ತೆಯ ಮೇಲೆ ನೀರು ನಿಲ್ಲುವ ಸಮಸ್ಯೆ ಕಡಿಮೆಯಾಗುವುದರ ಜತೆಗೆ, ಕೊಳಚೆ ನೀರು ಸಮರ್ಪಕವಾಗಿ ಹರಿದು ಹೋಗಲು ಅನುಕೂಲವಾಗಲಿದೆ. ಇದರಿಂದ ಸಾರ್ವಜನಿಕರ ಸಂಚಾರಕ್ಕೂ ಹಾಗೂ ಸುತ್ತಮುತ್ತಲಿನ ಪ್ರದೇಶದ ಸ್ವಚ್ಛತೆಗೂ ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಕಾಮಗಾರಿಯ ಗುಣಮಟ್ಟ ಹಾಗೂ ನಿಗದಿತ ಮಾನದಂಡಗಳನ್ನು ಪಾಲಿಸುವಂತೆ ಸಂಬಂಧಪಟ್ಟ ಸಿಬ್ಬಂದಿಗೆ ಸೂಚಿಸಿದ ಅವರು, ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದ ರೀತಿಯಲ್ಲಿ ಕಾಮಗಾರಿ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆಯ ಎಡಬ್ಲ್ಯೂ ಶಶಿಕಾಂತ್, ಅಭಿಯಂತರ ಪುರುಷೋತ್ತಮ್ ರೆಡ್ಡಿ ಸೇರಿದಂತೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಸಿರಿಗೆರೆ ಕಾರ್ಯಕ್ರಮಕ್ಕೆ ಬಸ್‌ಗಳ ನಿಯೋಜನೆ: ಜಗಳೂರು ಮಾರ್ಗದ ಪ್ರಯಾಣಿಕರ ಪರದಾಟ



"ಮುಂಜಾನೆಯ ಮೆರಗು"

ದಾವಣಗೆರೆ, ಸೆ.24– ಸಿರಿಗೆರೆಯಲ್ಲಿ ಗುರುವಾರ ನಡೆದ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ಬಸ್‌ಗಳನ್ನು ನಿಯೋಜಿಸಿದ್ದರಿಂದ ದಾವಣಗೆರೆ–ಜಗಳೂರು ಮಾರ್ಗದ ಪ್ರಯಾಣಿಕರು ಪರದಾಡುವಂತಾಯಿತು.

ಸಿರಿಗೆರೆ ಕಾರ್ಯಕ್ರಮಕ್ಕೆ ಪ್ರಯಾಣಿಕರ ಅನುಕೂಲಕ್ಕಾಗಿ ಕೆಎಸ್‌ಆರ್‌ಟಿಸಿ ಬಸ್‌ಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಬಳಸಿಕೊಂಡ ಪರಿಣಾಮ ಜಗಳೂರು ಮಾರ್ಗದಲ್ಲಿ ಸಂಚರಿಸುವ ಬಸ್‌ಗಳ ಸಂಖ್ಯೆ ತೀರಾ ಕಡಿಮೆಯಾಗಿತ್ತು. ಗುರುವಾರ ಬೆಳಗ್ಗೆಯಿಂದಲೇ ದಾವಣಗೆರೆ ಬಸ್ ನಿಲ್ದಾಣದಲ್ಲಿ ಜಗಳೂರು ಕಡೆ ತೆರಳಲು ವಿದ್ಯಾರ್ಥಿಗಳು, ರೈತರು, ಮಹಿಳೆಯರು ಸೇರಿದಂತೆ ನೂರಾರು ಪ್ರಯಾಣಿಕರು ಕಾದು ನಿಲ್ಲುವ ಪರಿಸ್ಥಿತಿ ನಿರ್ಮಾಣವಾಯಿತು.

ನಿಗದಿತ ಸಮಯಕ್ಕೆ ಬಸ್‌ಗಳು ದೊರೆಯದೆ ಪ್ರಯಾಣಿಕರು ಗಂಟೆಗಟ್ಟಲೆ ಕಾಯಬೇಕಾಯಿತು. ಕೆಲ ಬಸ್‌ಗಳು ಬಂದಾಗ ಅವುಗಳಲ್ಲಿ ಈಗಾಗಲೇ ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಕರು ತುಂಬಿದ್ದರಿಂದ ಬಸ್ ಹತ್ತಲು ಹರಸಾಹಸ ಪಡುವಂತಾಯಿತು. ವಿದ್ಯಾರ್ಥಿಗಳು ಶಾಲಾ–ಕಾಲೇಜುಗಳಿಗೆ ಸಮಯಕ್ಕೆ ತಲುಪಲಾಗದೆ ತೊಂದರೆ ಅನುಭವಿಸಿದರೆ, ರೈತರು ಕೃಷಿ ಕೆಲಸಗಳಿಗೆ ತೆರಳಲು ಹಾಗೂ ಮಹಿಳೆಯರು ತಮ್ಮ ವೈಯಕ್ತಿಕ ಕೆಲಸಗಳಿಗೆ ತೆರಳಲು ಪರದಾಡಿದರು.

ಸಿರಿಗೆರೆ ಕಾರ್ಯಕ್ರಮಕ್ಕೆ ಬಸ್‌ಗಳನ್ನು ನಿಯೋಜಿಸುವ ಮುನ್ನ ಜಗಳೂರು ಸೇರಿದಂತೆ ಪ್ರಮುಖ ಮಾರ್ಗಗಳಲ್ಲಿನ ಪ್ರಯಾಣಿಕರ ದಟ್ಟಣೆಯನ್ನು ಪರಿಗಣಿಸಿ ಪರ್ಯಾಯ ಸಾರಿಗೆ ವ್ಯವಸ್ಥೆ ಕಲ್ಪಿಸಬೇಕಾಗಿತ್ತು. ಆದರೆ ಅಧಿಕಾರಿಗಳು ಈ ಬಗ್ಗೆ ಸೂಕ್ತ ಮುನ್ನೆಚ್ಚರಿಕೆ ವಹಿಸಿಲ್ಲ ಎಂದು ಪ್ರಯಾಣಿಕರು ಆಕ್ರೋಶ ವ್ಯಕ್ತಪಡಿಸಿದರು.

ಸರ್ಕಾರಿ ಬಸ್‌ಗಳು ಸಾರ್ವಜನಿಕರ ಅನುಕೂಲಕ್ಕಾಗಿ ಇರುವುದೇ ಹೊರತು, ಒಂದು ಕಾರ್ಯಕ್ರಮದ ಹಿನ್ನೆಲೆಯಲ್ಲಿ ಪ್ರಮುಖ ಮಾರ್ಗದ ಸಂಚಾರಕ್ಕೆ ತೊಂದರೆಯಾಗುವಂತೆ ಮಾಡಬಾರದು. ಪ್ರತಿನಿತ್ಯ ದಾವಣಗೆರೆ–ಜಗಳೂರು ಮಾರ್ಗವನ್ನು ಅವಲಂಬಿಸಿರುವ ವಿದ್ಯಾರ್ಥಿಗಳು, ರೈತರು ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಹೆಚ್ಚುವರಿ ಬಸ್‌ಗಳನ್ನು ವ್ಯವಸ್ಥೆ ಮಾಡಬೇಕು ಎಂದು ಪ್ರಯಾಣಿಕರು ಒತ್ತಾಯಿಸಿದರು.

ಬಸ್‌ಗಳ ಕೊರತೆಯಿಂದ ಉಂಟಾದ ತೊಂದರೆಗೆ ಸಾರಿಗೆ ಇಲಾಖೆ ಅಧಿಕಾರಿಗಳ ವಿರುದ್ಧ ಪ್ರಯಾಣಿಕರು ಅಸಮಾಧಾನ ವ್ಯಕ್ತಪಡಿಸಿ, ಮುಂದಿನ ದಿನಗಳಲ್ಲಿ ಇಂತಹ ಪರಿಸ್ಥಿತಿ ಮರುಕಳಿಸದಂತೆ ಸೂಕ್ತ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.

ಪೌರಕಾರ್ಮಿಕರ ಸೇವೆಗೆ ಗೌರವ: ಸೆ.25ರಂದು ಬೆಂಗಳೂರಿನಲ್ಲಿ ಕಾರ್ಯಕ್ರಮ



"ಮುಂಜಾನೆಯ ಮೆರಗು"

ಜಗಳೂರು ಸೆ, 24– ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಚ್ಛತೆ ಹಾಗೂ ನೈರ್ಮಲ್ಯ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವ ಪೌರಕಾರ್ಮಿಕರ ಸೇವೆಯನ್ನು ಗೌರವಿಸುವ ಉದ್ದೇಶದಿಂದ ಸೆ.25ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ವಿಶೇಷ ಪೌರಕಾರ್ಮಿಕರ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಬೆಂಗಳೂರಿನ ಪ್ಯಾಲೇಸ್ ಗ್ರೌಂಡ್ಸ್, ಬಳ್ಳಾರಿ ರಸ್ತೆಯ ಅರಮನೆ ಮೈದಾನದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ನಗರ ಸ್ಥಳೀಯ ಸಂಸ್ಥೆಗಳಿಂದ ಪೌರಕಾರ್ಮಿಕರು ಭಾಗವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಪೌರಕಾರ್ಮಿಕರ ಸೇವೆಯನ್ನು ಸ್ಮರಿಸುವುದರ ಜತೆಗೆ, ಅವರ ಕಲ್ಯಾಣ ಮತ್ತು ಗೌರವಕ್ಕೆ ಸಂಬಂಧಿಸಿದ ಕಾರ್ಯಕ್ರಮಗಳು ನಡೆಯಲಿವೆ.

ಕರ್ತವ್ಯಕ್ಕೆ ಹಾಜರಾದಂತೆ ಪರಿಗಣನೆ

ಕಾರ್ಯಕ್ರಮದಲ್ಲಿ ಭಾಗವಹಿಸುವ ಪೌರಕಾರ್ಮಿಕರಿಗೆ ಸೆ.25ರಂದು ಒಂದು ದಿನದ ರಜೆ ನೀಡಲಾಗಿದ್ದು, ಈ ದಿನವನ್ನು ಕರ್ತವ್ಯಕ್ಕೆ ಹಾಜರಾಗಿರುವ ದಿನವೆಂದು ಪರಿಗಣಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಇದರಿಂದ ಕಾರ್ಯಕ್ರಮದಲ್ಲಿ ಪೌರಕಾರ್ಮಿಕರು ಯಾವುದೇ ಆತಂಕವಿಲ್ಲದೆ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ.

ಊಟೋಪಚಾರ, ಪ್ರಯಾಣಕ್ಕೆ ವ್ಯವಸ್ಥೆ

ಕಾರ್ಯಕ್ರಮಕ್ಕೆ ಆಗಮಿಸುವ ಪೌರಕಾರ್ಮಿಕರಿಗೆ ಊಟೋಪಚಾರ ಸೇರಿದಂತೆ ಅಗತ್ಯ ಮೂಲಸೌಕರ್ಯ ಹಾಗೂ ಇತರ ವ್ಯವಸ್ಥೆಗಳನ್ನು ಕಲ್ಪಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ವಿವಿಧ ಜಿಲ್ಲೆ ಹಾಗೂ ನಗರ ಸ್ಥಳೀಯ ಸಂಸ್ಥೆಗಳಿಂದ ಆಗಮಿಸುವವರಿಗೆ ಸೂಕ್ತ ವ್ಯವಸ್ಥೆ ಕಲ್ಪಿಸುವಂತೆ ಸೂಚಿಸಲಾಗಿದೆ.

ಅಲ್ಲದೆ, ಕಾರ್ಯಕ್ರಮಕ್ಕೆ ಆಗಮಿಸುವ ಪೌರಕಾರ್ಮಿಕರು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಪ್ರಯಾಣಿಸಲು ಅಗತ್ಯ ವ್ಯವಸ್ಥೆ ಕಲ್ಪಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಸ್ವಚ್ಛತಾ ಕಾರ್ಯದಲ್ಲಿ ಮಹತ್ವದ ಸೇವೆ

ನಗರಗಳ ಸ್ವಚ್ಛತೆ, ನೈರ್ಮಲ್ಯ ಹಾಗೂ ಸಾರ್ವಜನಿಕ ಆರೋಗ್ಯ ಕಾಪಾಡುವಲ್ಲಿ ಪೌರಕಾರ್ಮಿಕರ ಸೇವೆ ಅತ್ಯಂತ ಮಹತ್ವದ್ದಾಗಿದೆ. ಪ್ರತಿದಿನ ಬೆಳಗ್ಗೆಯಿಂದಲೇ ನಗರ ಪ್ರದೇಶಗಳ ರಸ್ತೆ, ಚರಂಡಿ ಸೇರಿದಂತೆ ವಿವಿಧೆಡೆ ಸ್ವಚ್ಛತಾ ಕಾರ್ಯದಲ್ಲಿ ತೊಡಗಿಸಿಕೊಳ್ಳುವ ಪೌರಕಾರ್ಮಿಕರ ಸೇವೆಯನ್ನು ಗುರುತಿಸಿ ಗೌರವಿಸುವ ನಿಟ್ಟಿನಲ್ಲಿ ಈ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ.

ಭದ್ರಾ ಮೇಲ್ದಂಡೆ ಯೋಜನೆಯಿಂದ ಬಯಲುಸೀಮೆಗೆ ನೀರು: ಗಂಗಾ ಪೂಜೆ ಕಾರ್ಯಕ್ರಮಕ್ಕೆ ಕೀರ್ತಿಕುಮಾರ್ ನೇತೃತ್ವದಲ್ಲಿ ಕಾಂಗ್ರೆಸ್ ಕಾರ್ಯಕರ್ತರು





"ಮುಂಜಾನೆಯ ಮೆರಗು"

ಜಗಳೂರು, ಸೆ.24– ಬಯಲುಸೀಮೆ ಭಾಗದ ಜನರ ಬಹುದಿನಗಳ ನೀರಿನ ನಿರ